ಸಂಪಾದಕರು: ರವಿಕುಮಾರ್ ಸಿ.ಹೆಚ್.
RNI: KARKAN/2021/80805
ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

# ಸೂರ್ಯ ಪ್ರಗತಿ

SURYA PRAGATHI Kannada daily
SP NEWS ಡಿಜಿಟಲ್ ನ್ಯೂಸ್ ಕಹಾನಿ
ಪ್ರತಿ ಸುದ್ದಿಯ ಧ್ವನಿ

suryapragathidailynews@gmail.com 9901010109 L2/RNP-1285/TMR/2025-27

Volume: 05 ಸಂಪುಟ: 05 | Issue: 161 ಸಂಚಿಕೆ: 161 | Date: 17-07-2026 Friday | RNI NO : KARKAN/2021/80805 | L2/RNP-1285/TMR/2025-27 | Page: 4 ಪುಟ : 4 | Price: 1.00 ಬೆಲೆ: 1.00 ರೂ

# ಸಂಪುಟ ವಿಸ್ತರಣೆ ಸರ್ಕಸ್ ಅಂತಿಮವಾಗದ ಸಚಿವರ ಪಟ್ಟಿ



ಸೂರ್ಯಪ್ರಗತಿನ್ಯೂಸ್.ಕಾಂ

ನವದೆಹಲಿ: ಡಿಕೆ ಶಿವಕುಮಾರ್ ನೇತೃತ್ವದ ಸಚಿವ ಸಂಪುಟ ವಿಸ್ತರಣೆ ಕರಸತ್ತು ಮತ್ತಷ್ಟು ತೀವ್ರಗೊಂಡಿದ್ದು, ಕಾಂಗ್ರೆಸ್‌ನ ಹಲವು ಶಾಸಕರು ಸಚಿವ ಸ್ಥಾನಕ್ಕಾಗಿ ತೀವ್ರ ಲಾಭಿ ನಡೆಸುತ್ತಿದ್ದಾರೆ. ಆದರೆ ಇದುವರೆಗೂ ನೂತನ ಸಚಿವರ ಪಟ್ಟಿ ಅಂತಿಮವಾಗಿಲ್ಲ ಎಂದು ಮೂಲಗಳು ತಿಳಿಸಿವೆ.

ಈ ಮಧ್ಯೆ, ಸಚಿವ ಸಂಪುಟ ವಿಸ್ತರಣೆಗೆ ಸಂಬಂಧಿಸಿದ ಚರ್ಚೆಗಳು ಒಂದು ಅಥವಾ ಎರಡು ದಿನ ಮುಂದೂಡಲಾಗಿದೆ ಎಂದು ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ(ಕೆಪಿಸಿಸಿ) ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರು ಗುರುವಾರ ಹೇಳಿದ್ದಾರೆ. ಇದರಿಂದ ಸಚಿವ ಆಕಾಂಕ್ಷಿಗಳಿಗೆ ತೀವ್ರ ನಿರಾಶೆಯಾಗಿದೆ.

ಮಾಧ್ಯಮಗಳೊಂದಿಗೆ ಮಾತನಾಡಿದ ಹರಿಪ್ರಸಾದ್, "ನಾವು ಕೆಲವು ವಿಷಯಗಳ ಬಗ್ಗೆ ಚರ್ಚಿಸಿದ್ದೇವೆ. ಅದರ ಹೊರತಾಗಿ, ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ(ಮಲ್ಲಿಕಾರ್ಜುನ ಖರ್ಗೆ)ರು ಬೆಂಗಳೂರಿಗೆ ಹೋಗಿದ್ದಾರೆ. ಹೀಗಾಗಿ ಒಂದು ಅಥವಾ ಎರಡು ದಿನ ಮಾತುಕತೆ ಮುಂದೂಡಲಾಗಿದೆ. ಚರ್ಚೆಗಳು ಪುನರಾರಂಭವಾದಾಗ ನಮಗೆ ತಿಳಿಸುತ್ತಾರೆ" ಎಂದರು.ಇದಕ್ಕೂ ಮೊದಲು, ಹರಿಪ್ರಸಾದ್ ಅವರಿಗೂ ಸಚಿವ ಸ್ಥಾನ ನೀಡಬಹುದು ಎಂಬ ವರದಿಗಳ ಬಗ್ಗೆ ಪ್ರತಿಕ್ರಿಯಿಸಿದ ಅವರು, "ನನಗೆ ಅದರ ಬಗ್ಗೆ ಮಾಹಿತಿ ಇಲ್ಲ. ಆ ಬಗ್ಗೆ ಹೈಕಮಾಂಡ್ ನಿರ್ಧರಿಸುತ್ತದೆ" ಎಂದರು.

ಸಚಿವ ಸಂಪುಟ ವಿಸ್ತರಣೆಯನ್ನು ಒಂದೇ ಹಂತದಲ್ಲಿ ಮಾಡಬೇಕೇ ಅಥವಾ ಬೇಡವೇ ಎಂಬುದನ್ನು ಸಹ ಪಕ್ಷದ ಹೈಕಮಾಂಡ್ ನಿರ್ಧರಿಸುತ್ತದೆ. ಪಕ್ಷದಲ್ಲಿ ಐದಾರು ಬಾರಿ ಶಾಸಕರಾದವರೂ ಇದ್ದಾರೆ. ಹಲವು ಶಾಸಕರಿಗೆ ಈಗಾಗಲೇ ಹಲವು ಬಾರಿ ಸಚಿವರಾಗುವ ಅವಕಾಶ ಸಿಕ್ಕಿದೆ. ಹೀಗಾಗಿ ಯಾರನ್ನು ಸಂಪುಟಕ್ಕ ಸೇರಿಸಿಕೊಳ್ಳಬೇಕು ಎಂಬುದನ್ನು ಹೈಕಮಾಂಡ್ ನಿರ್ಧರಿಸುತ್ತದೆ ಎಂದರು.

ನಾನು ದೆಹಲಿಗೆ ಯಾವುದೇ ಪಟ್ಟಿಯನ್ನು ತಂದಿಲ್ಲ. ನಾನು ಪಟ್ಟಿ ಹಿಡಿದುಕೊಂಡು ಓಡಾಡುವ ವ್ಯಕ್ತಿ ಅಲ್ಲ. ಪಕ್ಷದ ಅಧ್ಯಕ್ಷನಾಗಿ ನನಗೆ ಎಲ್ಲಾ ಶಾಸಕರೂ ಸಮಾನರು. ನಾನು ಯಾರ ಪರವಾಗಿಯೂ ಲಾಬಿ ಮಾಡುವುದಿಲ್ಲ ಎಂದು ಹರಿಪ್ರಸಾದ್ ಸ್ಪಷ್ಟಪಡಿಸಿದ್ದಾರೆ.

# 'ಬರವನ್ನು ರಾಷ್ಟ್ರೀಯ ವಿಪತ್ತು ಎಂದು ಘೋಷಿಸಿ'; ಪ್ರಧಾನಿ ಮೋದಿಗೆ ಡಿಸಿಎಂ ಪರಮೇಶ್ವರ್ ಪತ್ರ

ಸೂರ್ಯಪ್ರಗತಿನ್ಯೂಸ್.ಕಾಂ

ಬೆಂಗಳೂರು: ಬರ ಪರಿಸ್ಥಿತಿಯನ್ನು 'ರಾಷ್ಟ್ರೀಯ ವಿಪತ್ತು' ಎಂದು ಘೋಷಿಸಿ ವಿಶೇಷ ಆರ್ಥಿಕ ನೆರವು ನೀಡುವಂತೆ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರು ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ.ರಾಜ್ಯದಲ್ಲಿ ತೀವ್ರ ಮಳೆ ಕೊರತೆ, ಕುಡಿಯುವ ನೀರಿನ ಬಿಕ್ಕಟ್ಟು ಹಾಗೂ ಕೃಷಿ ವಲಯದಲ್ಲಿ ಉಂಟಾಗಿರುವ ಸಂಕಷ್ಟವನ್ನು ಉಲ್ಲೇಖಿಸಿ, ಬರ ಪರಿಸ್ಥಿತಿಯನ್ನು 'ರಾಷ್ಟ್ರೀಯ ವಿಪತ್ತು' ಎಂದು ಘೋಷಿಸಿ ವಿಶೇಷ ಆರ್ಥಿಕ ನೆರವು ನೀಡುವಂತೆ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರು ಪ್ರಧಾನಿ ನರೇಂದ್ರ ಮೋದಿಗೆ ಪತ್ರ ಬರೆದು ಮನವಿ ಮಾಡಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ (ಘಿ)ನಲ್ಲಿ ಮಾಹಿತಿ ಹಂಚಿಕೊಂಡಿರುವ ಪರಮೇಶ್ವರ್, 'ಕರ್ನಾಟಕದಲ್ಲಿ ಜೂನ್ ತಿಂಗಳಲ್ಲಿ ಶೇ.42ರಷ್ಟು ಹಾಗೂ ಜುಲೈನಲ್ಲಿ ಇದುವರೆಗೆ ಶೇ.34ರಷ್ಟು ಮಳೆ ಕೊರತೆ ದಾಖಲಾಗಿದೆ. ಈ ಮಳೆ ಕೊರತೆಯಿಂದ ಬೆಳೆಗಳಿಗೆ ಭಾರೀ ಹಾನಿಯಾಗಿದ್ದು, ಅಂತರ್ಜಲ ಮಟ್ಟ ಕುಸಿತ, ಜಲಾಶಯಗಳಿಗೆ ನೀರಿನ ಹರಿವು ಕಡಿಮೆಯಾಗಿರುವುದು ಹಾಗೂ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರಗೊಂಡಿದೆ ಎಂದು ಅವರು ಹೇಳಿದ್ದಾರೆ.



"ಕರ್ನಾಟಕದಲ್ಲಿ ತೀವ್ರ ಮಳೆ ಕೊರತೆ, ಕುಡಿಯುವ ನೀರಿನ ಬಿಕ್ಕಟ್ಟು ಹಾಗೂ ಕೃಷಿ ಮತ್ತು ಗ್ರಾಮೀಣ ಜೀವನೋಪಾಯದ ಮೇಲೆ ಗಂಭೀರ ಪರಿಣಾಮ ಉಂಟಾಗಿರುವ ಹಿನ್ನೆಲೆಯಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರಿಗೆ ವಿಶೇಷ ನೆರವು ಕೋರಿ ಪತ್ರ ಬರೆದಿದ್ದೇನೆ" ಎಂದು ಪರಮೇಶ್ವರ್ ತಿಳಿಸಿದ್ದಾರೆ.

ರಾಜ್ಯದ ಹಲವು ಪ್ರದೇಶಗಳಲ್ಲಿ ಬಿತ್ತನೆಯಾದ ಬೆಳೆಗಳಲ್ಲಿ ಸುಮಾರು ಶೇ.80ರಷ್ಟು ನಷ್ಟ ಸಂಭವಿಸಿದೆ ಎಂದು ಅವರು ಉಲ್ಲೇಖಿಸಿದ್ದು, ರೈತರು ಮತ್ತು ಗ್ರಾಮೀಣ ಜನರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಜಲಾಶಯಗಳಿಗೆ ನೀರಿನ ಹರಿವು ಕಡಿಮೆಯಾಗಿರುವುದರಿಂದ ಹಾಗೂ ಅಂತರ್ಜಲ ಮಟ್ಟ ಕುಸಿದಿರುವುದರಿಂದ ನೀರಿನ ಭದ್ರತೆಗೂ ಧಕ್ಕೆಯಾಗಿದೆ ಎಂದು ಹೇಳಿದ್ದಾರೆ.

ಬರ ಪರಿಹಾರ ನಿಯಮಗಳಲ್ಲಿ ಬದಲಾವಣೆಗೆ ಆಗ್ರಹಬರ ಪರಿಹಾರ ವ್ಯವಸ್ಥೆಯನ್ನು ಆಧುನೀಕರಿಸುವಂತೆ ಕೇಂದ್ರ ಸರ್ಕಾರವನ್ನು ಪರಮೇಶ್ವರ್ ಒತ್ತಾಯಿಸಿದ್ದಾರೆ. ಸಣ್ಣ ಮತ್ತು ಅತಿ ಸಣ್ಣ ರೈತರ ಗುರುತಿಸುವಿಕೆಗೆ 2015–16ರ ಕೃಷಿ ಜನಗಣತಿ ಮಾಹಿತಿಯ ಬದಲಾಗಿ, ಕರ್ನಾಟಕ ಸರ್ಕಾರದ ನವೀಕರಿಸಿದ ಈಖಗಿಖಖಿಖ ಡೇಟಾಬೇಸ್ ಅನ್ನು ಪರಿಗಣಿಸಬೇಕು ಎಂದು ಅವರು ಮನವಿ ಮಾಡಿದ್ದಾರೆ.

ಅದೇ ರೀತಿ, ಎಸ್‌ಡಿಆರ್‌ಎಫ್ (ಖಆಖಈ), ಎನ್‌ಡಿಆರ್‌ಎಫ್ (ಓಆಖಈ) ಮಾರ್ಗಸೂಚಿಗಳು ಹಾಗೂ 2020ರ ಬರ ಕೈಪಿಡಿಯಲ್ಲಿರುವ ಬೆಳೆ ನಷ್ಟ ಪರಿಹಾರ ಮಾನದಂಡಗಳನ್ನು ಏಕರೂಪಗೊಳಿಸುವ ಮೂಲಕ ರೈತರಿಗೆ ತ್ವರಿತ ಮತ್ತು ನ್ಯಾಯಸಮ್ಮತ ಪರಿಹಾರ ಒದಗಿಸಬೇಕು ಎಂದು ಒತ್ತಾಯಿಸಿದ್ದಾರೆ.

**ಮಳೆ ಕೊರತೆಯನ್ನೇ ಬರ ಘೋಷಣೆಗೆ ಮಾನದಂಡ ಮಾಡಿ**

ಇದೇ ವೇಳೆ ಬಿತ್ತನೆ ಅವಧಿಯಲ್ಲಿ ಶೇ.20ರಿಂದ ಶೇ.59ರವರೆಗಿನ ಮಳೆ ಕೊರತೆಯನ್ನೂ ಬರ ಘೋಷಣೆಯ ಮಾನದಂಡವಾಗಿ ಪರಿಗಣಿಸಬೇಕು ಎಂದು ಪರಮೇಶ್ವರ್ ಸಲಹೆ ನೀಡಿದ್ದಾರೆ. ಪ್ರಸ್ತುತ ಇರುವಂತೆ ಕೇವಲ ಋತುಮಾನದ ಒಟ್ಟು ಮಳೆ ಪ್ರಮಾಣವನ್ನು ಮಾತ್ರ ಆಧಾರವಾಗಿಟ್ಟುಕೊಳ್ಳದೆ, ಮಳೆ ಕೊರತೆಯನ್ನೂ ಪರಿಗಣಿಸುವಂತೆ ಮನವಿ ಮಾಡಿದ್ದಾರೆ.

ಇದಲ್ಲದೆ, ಸ್ಥಳೀಯ ಕೃಷಿ ಹಾಗೂ ಹವಾಮಾನ ಪರಿಸ್ಥಿತಿಗೆ ಅನುಗುಣವಾಗಿ 'ಒಣ ಅವಧಿ' ಎಂಬ ವ್ಯಾಖ್ಯಾನವನ್ನು ಪರಿಷ್ಕರಿಸಬೇಕು ಎಂದು ಅವರು ತಿಳಿಸಿದ್ದಾರೆ. ಬೆಳೆ ಬಿತ್ತನೆ ಪೂರ್ಣಗೊಳ್ಳುವವರೆಗೆ ಕಾಯದೆ, ಆರಂಭಿಕ ಹಂತದಲ್ಲಿಯೇ ರಾಜ್ಯ ಸರ್ಕಾರಗಳಿಗೆ ಬರ ಘೋಷಿಸುವ ಅವಕಾಶ ನೀಡಬೇಕು ಎಂದು ಕೇಂದ್ರ ಸರ್ಕಾರವನ್ನು ಕೋರಿದ್ದಾರೆ.

**'ರಾಷ್ಟ್ರೀಯ ವಿಪತ್ತು' ಘೋಷಣೆಗೆ ಒತ್ತಾಯ**

"ಪರಿಸ್ಥಿತಿಯ ಗಂಭೀರತೆಯನ್ನು ಗಮನಿಸಿ, ರಾಜ್ಯದ ಬರ ಪರಿಸ್ಥಿತಿಯನ್ನು ರಾಷ್ಟ್ರೀಯ ವಿಪತ್ತು ಎಂದು ಘೋಷಿಸಬೇಕು. ಅಥವಾ ಅದಕ್ಕೆ ಸಮಾನವಾದ ವಿಶೇಷ ಆರ್ಥಿಕ ನೆರವನ್ನು ಕೇಂದ್ರ ಸರ್ಕಾರ ನೀಡಬೇಕು" ಎಂದು ಪರಮೇಶ್ವರ್ ಪತ್ರದಲ್ಲಿ ಮನವಿ ಮಾಡಿದ್ದಾರೆ. ರೈತರ ಹಿತಾಸಕ್ತಿ, ಗ್ರಾಮೀಣ ಜನರ ಜೀವನೋಪಾಯ ಹಾಗೂ ರಾಜ್ಯದ ಕುಡಿಯುವ ನೀರಿನ ಭದ್ರತೆಯನ್ನು ಕಾಪಾಡಲು ಕೇಂದ್ರ ಸರ್ಕಾರವು ತಕ್ಷಣ ಮಧ್ಯಪ್ರವೇಶಿಸುವುದು ಅತ್ಯಗತ್ಯ ಎಂದು ಪರಮೇಶ್ವರ್ ಒತ್ತಿ ಹೇಳಿದ್ದಾರೆ.

# ಸುರಂಗ ರಸ್ತೆ ನಿರ್ಮಾಣ: ಲಾಲ್‌ಬಾಗ್ ನಲ್ಲಿ ಮರ ಕಡಿಯದಂತೆ ಮಧ್ಯಂತರ ಆದೇಶ

ರಾಜಧಾನಿ ಬೆಂಗಳೂರಿನ 'ಹೆಬ್ಬಾಳದಿಂದ ಸಿಲ್ಕ್ ಬೋರ್ಡ್‌ವರೆಗೂ ಸುರಂಗ ರಸ್ತೆ ನಿರ್ಮಾಣ ಯೋಜನೆ ಪ್ರಶ್ನಿಸಿ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳ ಅಂತಿಮ ವಿಚಾರಣೆಯನ್ನು ಕರ್ನಾಟಕ ಹೈಕೋರ್ಟ್ ಮುಂದೂಡಿದೆ. ಅಲ್ಲದೇ ಲಾಲ್‌ಬಾಗ್‌ನಲ್ಲಿ ಮರ ಕಡಿಯದಂತೆ ನೀಡಿದ್ದ ಮಧ್ಯಂತರ ಆದೇಶ ಮುಂದುವರಿಯಲಿದೆ.

ಬೆಂಗಳೂರು, ಹೆಬ್ಬಾಳದಿಂದ ಸಿಲ್ಕ್ ಬೋರ್ಡ್‌ವರೆ ನಿರ್ಮಿಸಲು ಉದ್ದೇಶಿಸಿರುವ ಸುರಂಗ ರಸ್ತೆ ಯೋಜನೆಗೆ ಸಂಬಂಧಿಸಿದಂತೆ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆಯನ್ನು ಕರ್ನಾಟಕ ಹೈಕೋರ್ಟ್ ಆಗಸ್ಟ್ 20ಕ್ಕೆ ನಿಗದಿಪಡಿಸಿದೆ. ಸುರಂಗ ರಸ್ತೆ ಯೋಜನೆಗೆ ಮಧ್ಯಂತರ ತಡೆಯಾಜ್ಞೆ ನೀಡುವಂತೆ ಪ್ರಕಾಶ್ ಬೆಳವಾಡಿ, ಡಾ. ಎ.ರವೀಂದ್ರ, ಸಿಟಿಜನ್ ಆಕ್ಷನ್ ಫೋರಂ





ಸಲ್ಲಿಸಿದ್ದ ಪಿಐಎಲ್ ಅರ್ಜಿಯನ್ನು ವಿಚಾರಣೆ ನಡೆಸಿದ ಕೋರ್ಟ್, ಕಾಮಗಾರಿ ಹೈಕೋರ್ಟ್‌ನ ಅಂತಿಮ ತೀರ್ಪಿಗೆ ಒಳಪಟ್ಟಿರುತ್ತದೆ. ಪಿಐಎಲ್ ಬಾಕಿಯಿರುವ ಬಗ್ಗೆ ಗುತ್ತಿಗೆದಾರರಿಗೆ ಮಾಹಿತಿ ನೀಡಲು ಸೂಚನೆ ನೀಡಿ ವಿಚಾರಣೆಯನ್ನು ಮುಂದೂಡಿದೆ. ಅರ್ಜಿದಾರರ ಪರ ತೇಜಸ್ವಿ ಸೂರ್ಯ, ಹಿರಿಯ ವಕೀಲ ಡಿ.ಆರ್.ರವಿಶಂಕರ್ ವಾದ ಮಂಡಿಸಿದರು.ಕಳೆದ ವಿಚಾರಣೆಯ ವೇಳೆ ನ್ಯಾಯಾಲಯವು ಸರ್ಕಾರ, ಗ್ರೇಟರ್ ಬೆಂಗಳೂರು ಪ್ರಾಧಿಕಾರ, ರಾಜ್ಯ ಪರಿಸರ ಅಧ್ಯಯನ ಮೌಲ್ಯಮಾಪನ ಪ್ರಾಧಿಕಾರ, ನಗರ ಭೂಸಾರಿಗೆ ನಿರ್ದೇಶನಾಲಯ, ಬೆಂಗಳೂರು ಸ್ಮಾರ್ಟ್ ಮೂಲಸೌಕರ್ಯ ನಿಯಮಿತ(ಸ್ಮೆಲ್) ರಾಡಿಕ್ ಕನ್ಸಲ್ಟೆಂಟ್ಸ್ ಮತ್ತು ಆಲ್ಟಿನೋಕ್ ಕನ್ಸಲ್ಟೆಂಟ್ಸ್ ಸೇರಿ ಎಲ್ಲಾ ಪ್ರತಿವಾದಿಗಳಿಗೆ ನೋಟಿಸ್ ಜಾರಿಗೊಳಿಸಿ ವಿಚಾರಣೆ ಮುಂದೂಡಿತ್ತು. ಅಲ್ಲದೆ, ಲಾಲ್‌ಬಾಗ್ ಬೊಟಾನಿಕಲ್ ಗಾರ್ಡನ್‌ನಂತಹ ಸೂಕ್ಷ್ಮ ಪ್ರದೇಶಗಳ ಅಡಿಯಲ್ಲಿ ಸುರಂಗ ನಿರ್ಮಾಣ ಮಾಡುವುದರಿಂದ ಆಗುವ ಅಪಾಯಗಳ ಬಗ್ಗೆ ಜಿಯೋಲಾಜಿಕಲ್ ಸರ್ವೆ ಆಫ್ ಇಂಡಿಯಾ(ಎಖಐ)ದಿಂದ ಅಭಿಪ್ರಾಯ ಪಡೆಯುವಂತೆ ಸೂಚಿಸಿತ್ತು.

# ಸಂಭ್ರಮದ ಸ್ವಾತಂತ್ರ್ಯೋತ್ಸವಕ್ಕೆ ಸಿದ್ಧತೆಗಳನ್ನು ಕೈಗೊಳ್ಳಲು ಜಿಲ್ಲಾಧಿಕಾರಿ ಸೂಚನೆ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು; ನಗರದ ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ ಆಗಸ್ಟ್ 15ರಂದು ಸ್ವಾತಂತ್ರ್ಯ ದಿನಾಚರಣೆಯ ಸಂಭ್ರಮಾಚರಣೆಗೆ ಸಕಲ ಸಿದ್ಧತೆಗಳನ್ನು ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಮಂಗಳವಾರ ಸ್ವಾತಂತ್ರ್ಯ ದಿನಾಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಸ್ವಾತಂತ್ರ್ಯ ದಿನಾಚರಣೆಯಲ್ಲಿ ನಾವೆಲ್ಲರೂ ಸಂತಸದಿಂದ ಭಾಗವಹಿಸಿ ಅರ್ಥಪೂರ್ಣವಾಗಿ ಹಬ್ಬದ ರೀತಿಯಲ್ಲಿ ಆಚರಿಸಬೇಕು. ಅದಕ್ಕೆ ಪೂರಕ ಸಿದ್ಧತೆಗಳನ್ನು ಕೈಗೊಳ್ಳಬೇಕೆಂದು ಸೂಚಿಸಿದರು.

ವಿವಿಧ ಶಾಲಾ–ಕಾಲೇಜು, ವಸತಿ ನಿಲಯಗಳ ಮಕ್ಕಳಿಂದ ದೇಶಭಕ್ತಿ ಬಿಂಬಿಸುವ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಬೇಕು. ಸಾಂಸ್ಕೃತಿಕ ಕಾರ್ಯಕ್ರಮವು ಸ್ವಚ್ಚತೆ, ಪರಿಸರ ಸಂರಕ್ಷಣೆ, ರಸ್ತೆ ಸುರಕ್ಷತೆ, ಜೀವಜಲ ಸಂರಕ್ಷಣೆಯಂತಹ ವಿಷಯಾಧಾರಿತವಾಗಿರಬೇಕು ಸೂಚಿಸಿದರು.

ಬೆಳಿಗ್ಗೆ 9 ಗಂಟೆಗೆ ಉಪ ಮುಖ್ಯಮಂತ್ರಿಗಳಿಂದ ಧ್ವಜಾರೋಹಣ: ಜಿಲ್ಲಾಡಳಿತ ವಿವಿಧ ಇಲಾಖೆ ಹಾಗೂ ಸಂಘ–ಸಂಸ್ಥೆಗಳ ಸಹಯೋಗದೊಂದಿಗೆ ಜಿಲ್ಲಾ ಕ್ರೀಡಾಂಗಣದಲ್ಲಿ ಆಗಸ್ಟ್ 15ರಂದು ಬೆಳಿಗ್ಗೆ 9 ಗಂಟೆಗೆ ಉಪ ಮುಖ್ಯಮಂತ್ರಿಗಳು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಿಂದ ಧ್ವಜಾರೋಹಣ, ಗೌರವ ರಕ್ಷೆ ಸ್ವೀಕಾರ, ಸ್ವಾತಂತ್ರ್ಯೋತ್ಸವದ ಸಂದೇಶ ನೀಡುವ ಕಾರ್ಯಕ್ರಮ ನಡೆಯಲಿದೆ.



ಕಾರ್ಯಕ್ರಮ ನಡೆಯಲಿರುವ ಜಿಲ್ಲಾ ಕ್ರೀಡಾಂಗಣದ ಸುತ್ತ–ಮುತ್ತ ಸ್ವಚ್ಛತಾ ಕಾರ್ಯ, ಕಾರ್ಯಕ್ರಮ ದಿನದಂದು ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕು. ನಗರದ ಚರ್ಚ್ ಸರ್ಕಲ್, ಲಕ್ಕಪ್ಪ ಸರ್ಕಲ್, ಕೋಟೆ ಶ್ರೀ ಆಂಜನೇಯ ಸ್ವಾಮಿ ಸರ್ಕಲ್, ಟೌನ್ ಹಾಲ್ ಸರ್ಕಲ್ ಸೇರಿದಂತೆ ಪ್ರಮುಖ ವೃತ್ತಗಳನ್ನು ತಳಿರು–ತೋರಣಗಳೊಂದಿಗೆ ವಿದ್ಯುತ್ ದೀಪಾಲಂಕಾರ ವ್ಯವಸ್ಥೆ ಮಾಡಬೇಕು. ಲೋಕೋಪಯೋಗಿ ಇಲಾಖೆ ವತಿಯಿಂದ ವೇದಿಕೆ ನಿರ್ಮಾಣ, ಧ್ವಜ ಸ್ಥಂಭ ನಿರ್ಮಾಣ ವ್ಯವಸ್ಥೆ, ಬ್ಯಾರಿಕೇಡ್ ವ್ಯವಸ್ಥೆ ಮಾಡಬೇಕು. ವೇದಿಕೆ ಸುತ್ತ–ಮುತ್ತ ಹೂಕುಂಡಗಳಿಂದ ಅಲಂಕರಿಸಬೇಕು. ವಿದ್ಯುತ್ ವ್ಯತ್ಯಯವಾಗದಂತೆ ಕ್ರಮ ಕೈಗೊಳ್ಳಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.ಸಭೆಯಲ್ಲಿ ಸ್ವಾಗತ ಸಮಿತಿ, ಪೆರೇಡ್ ಸಮಿತಿ, ಸನ್ಮಾನ ಸಮಿತಿ, ಸಿಹಿ ವಿತರಣೆ ಸಮಿತಿ, ಸಾಂಸ್ಕೃತಿಕ ಕಾರ್ಯಕ್ರಮ ಸಮಿತಿಗಳನ್ನು ರಚಿಸಿ ವಿವಿಧ ಕೆಲಸ–ಕಾರ್ಯಗಳನ್ನು ಹಂಚಿಕೆ ಮಾಡಲಾಯಿತು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ, ಪಾಲಿಕೆ ಆಯುಕ್ತೆ ಬಿ.ಶುಭ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ರಘುಚಂದ್ರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ॥ ಬಿ.ಎಂ. ಚಂದ್ರಶೇಖರ್, ಉಪವಿಭಾಗಾಧಿಕಾರಿ ನಾಹಿದಾ ಜಂ ಜಂ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಯೋಗಾನಂದ, ತಹಶೀಲ್ದಾರ್ ರಾಜೇಶ್ವರಿ, ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕಿ ಶಾರದಮ್ಮ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕಿ ಸೋನಿಯಾ ವರ್ಣೇಕರ್ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಆಂಧ್ರದಲ್ಲಿ ಕೋವಿಡ್ ನಿಂದ ಎರಡು ಸಾವು: ಪಾವಗಡ ಗಡಿಯಲ್ಲಿ ಹೈ ಅಲರ್ಟ್

## ಆರೋಗ್ಯ ಇಲಾಖೆಯಿಂದ ಕಟ್ಟುನಿಟ್ಟಿನ ತಪಾಸಣೆ



ತುಮಕೂರು: ನೆರೆಯ ಆಂಧ್ರಪ್ರದೇಶದ ವೈಎಸ್ ಆರ್ ಕಡಪ ಜಿಲ್ಲೆಯಲ್ಲಿ ಕೋವಿಡ್ ಸೋಂಕಿನಿಂದ ಇಬ್ಬರು ಮೃತಪಟ್ಟಿರುವ ಹಿನ್ನೆಲೆಯಲ್ಲಿ ಗಡಿಭಾಗವಾದ ಪಾವಗಡ ತಾಲೂಕಿನಲ್ಲಿ ಜಿಲ್ಲಾಡಳಿತ ಹೈ ಅಲರ್ಟ್ ಘೋಷಿಸಿದೆ. ಜಿಲ್ಲಾಧಿಕಾರಿ ಶುಭಾ ಕಲ್ಯಾಣ್ ಅವರ ನಿರ್ದೇಶನದಂತೆ ಆರೋಗ್ಯ ಇಲಾಖೆ ಅಧಿಕಾರಿಗಳು ಆಶಾ ಕಾರ್ಯಕರ್ತರೊಂದಿಗೆ ರಾಜವಂತಿ, ನಾಗಲಮಡಿಕೆ ಹಾಗೂ ಕೊಡಮಡುಗು ಗಡಿ ಭಾಗಗಳಲ್ಲಿ ತೀವ್ರ ನಿಗಾ ವಹಿಸಿದ್ದಾರೆ. ಆಂಧ್ರಪ್ರದೇಶದಿಂದ ಆಗಮಿಸುವ ಪ್ರಯಾಣಿಕರ ಆರೋಗ್ಯವನ್ನು ಥರ್ಮಲ್ ಸ್ಕ್ಯಾನರ್ ಮೂಲಕ ಪರಿಶೀಲಿಸಿ, ಕೋವಿಡ್ ಸೋಂಕಿನ ಲಕ್ಷಣಗಳ ಬಗ್ಗೆ ತಪಾಸಣೆ ನಡೆಸಲಾಗುತ್ತಿದೆ. ಮುಂಜಾಗ್ರತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದ್ದು, ಸೋಂಕು ಹರಡದಂತೆ ಎಲ್ಲ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ. ಸಾರ್ವಜನಿಕರು ಆತಂಕಪಡದೆ ಮುನ್ನೆಚ್ಚರಿಕೆ ಪಾಲಿಸುವಂತೆ ಆರೋಗ್ಯ ಇಲಾಖೆ ಮನವಿ ಮಾಡಿದೆ.

# ಶೇ99.72ರಷ್ಟು ಮತದಾರರಿಗೆ ಎನ್ಮರೇಷನ್ ಫಾರಂ ಹಂಚುವ ಮೂಲಕ ಬಿಎಲ್‌ಓಗಳು ಉತ್ತಮ ಕೆಲಸ ಮಾಡಿದ್ದಾರೆ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು– ರಾಜ್ಯ ಚುನಾವಣಾ ಆಯೋಗ ನಡೆಸುತ್ತಿರುವ ಎಸ್.ಐ.ಆರ್.ನಲ್ಲಿ ತುಮಕೂರು ನಗರ ವಿಧಾನಸಭಾ ಕ್ಷೇತ್ರದಲ್ಲಿ ಜಿಲ್ಲಾಡಳಿತ, ಚುನಾವಣಾ ಆಯೋಗದ ಸಹಕಾರದಿಂದ ಉತ್ತಮವಾಗಿ ಮತದಾರರ ನೊಂದಣಿ ನಡೆದಿದ್ದು, ಶೇ99.72ರಷ್ಟು ಮತದಾರರಿಗೆ ಎನ್ಮರೇಷನ್ ಫಾರಂ ಹಂಚುವ ಮೂಲಕ ಬಿಎಲ್‌ಓಗಳು ಉತ್ತಮ ಕೆಲಸ ಮಾಡಿದ್ದಾರೆ ಎಂದು ಮಾಜಿ ಶಾಸಕ ಡಾ.ಎಸ್.ರಫೀಕ್ ಅಹಮದ್ ಶ್ಲಾಘೀಸಿದ್ದಾರೆ.

ನಗರದ 7ನೇ ವಾರ್ಡಿನ ಜಿ.ಸಿ.ಆರ್. ಕಾಲೋನಿಯ ಕೆಲ ಬಡಾವಣೆಗಳಿಗೆ ಭೇಟಿ ನೀಡಿ,ಎಸ್.ಐ.ಆರ್. ಪ್ರಕ್ರಿಯೆ ಕಾರ್ಯವನ್ನು ವೀಕ್ಷಿಸಿದ ನಂತರ,ಅಲ್ಲಿನ ಮತದಾರರು ಮತ್ತು ಬಿ.ಎಲ್.ಓ ಗಳಿಂದ ಮಾಹಿತಿ ಪಡೆದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು,ಚುನಾವಣಾ ಆಯೋಗದಿಂದ ನೇಮಕವಾಗಿರುವ ಬಿಎಲ್‌ಓಗಳು ಪ್ರತಿ ಮನೆ ಮನೆಗೆ ಭೇಟಿ ನೀಡಿ ಫಾರಂ ನೀಡುವ ಮೂಲಕ ಎಸ್.ಐ.ಆರ್.ಪ್ರಕ್ರಿಯೆಗೆ ಒಳ್ಳೆಯ ಸಾಥ್ ನೀಡಿದ್ದಾರೆ ಎಂದರು.



ಕಳೆದ 29 ರಿಂದ ಎಸ್.ಐ.ಆರ್.ಪ್ರಕ್ರಿಯೆ ರಾಜ್ಯದಲ್ಲಿ ಆರಂಭವಾಗಿದ್ದು, ತುಮಕೂರು ನಗರ ವಿಧಾನಸಭಾ ಕ್ಷೇತ್ರದಲ್ಲಿ ಎಸ್.ಐ.ಆರ್. ಬಹಳ ತ್ವರಿತಗತಿಯಲ್ಲಿ ನಡೆಯುತ್ತಿದೆ. ತುಮಕೂರು ನಗರ 132ನೇ ವಿಧಾನಸಭಾ ಕ್ಷೇತ್ರದಲ್ಲಿ 247 ಬೂತ್ ಗಳಿದ್ದು,2,83,800 ಮತದಾರರಿದ್ದು,ಈಗಾಗಲೇ ಬಿಎಲ್‌ಓಗಳು 2,73ಲಕ್ಷ ಎನ್ಮರೇಷನ್ ಫಾರಂನ್ನು ತಲುಪಿಸಿದ್ದು,99.72 ಜನರಿಗೆ ಫಾರಂಗಳು ತಲುಪಿವೆ.ಇವುಗಳಲ್ಲಿ 80500 ಫಾರಂಗಳು ಡಿಜಿಟೈಜೇಷನ್ ಆಗಿವೆ. ಬಾಕಿ ಫಾರಂಗಳು ಅಪ್‌ಲೋಡ್ ನಡೆಯುತ್ತಿದೆ.ಎಲ್ಲಾ ಬಿಎಲ್‌ಓಗಳು ಮನೆ ಮನೆ ಭೇಟಿಯ ಜೊತೆಗೆ, ಫಾರಂ ತುಂಬಲು ಸಹ ಸಹಕಾರ ನೀಡುತ್ತಿದ್ದಾರೆ. ಹಾಗಾಗಿ ನಾಗರಿಕರ ಪರವಾಗಿ ಅಧಿಕಾರಿಗಳಿಗೆ ಅಭಿನಂದನೆ ಸಲ್ಲಿಸುವುದಾಗಿ ಡಾ.ರಫೀಕ್ ಅಹಮದ್ ನುಡಿದರು.

ಅಧಿಕಾರಿಗಳ ಮಾಹಿತಿ ಪ್ರಕಾರ ಒಂದು ದಿನಕ್ಕೆ 45 ರಿಂದ 50 ಫಾರಂಗಳನ್ನು ಮಾತ್ರ ಡಿಜಿಟಲೈಜೇಷನ್ ಮಾಡಲು ಸಾಧ್ಯ. ಹಾಗಾಗಿ ಚುನಾವಣಾ ಆಯೋಗವೂ ಜುಲೈ 30ಕ್ಕೆ ಇದ್ದ ಕೊನೆಯ ದಿನಾಂಕವನ್ನು ಆಗಸ್ಟ್ 08ರವರೆಗೆ ಮುಂದೂಡಿದೆ. ಅಷ್ಟರೊಳಗೆ ಎಲ್ಲರೂ ತಮ್ಮ ಬಳಿ ಇರುವ ಫಾರಂನ್ನು ಬಿಎಲ್‌ಓ ಅವರಿಗೆ ನೀಡಿ, ಅವರಿಂದ ಸ್ವೀಕೃತಿ ಪಡೆದು, ಅದನ್ನು ಭದ್ರಪಡಿಸಿ ಇಟ್ಟುಕೊಂಡು, ಕರಡು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಇಂದೆಯೇ ಎಂದು ಖಚಿತ ಮಪಡಿಸಿಕೊಳ್ಳುವಂತೆ ಡಾ.ರಫೀಕ್ ಅಹಮದ್ ಸಲಹೆ ನೀಡಿದರು.

ಎನ್ಮರೇಷನ್ ಫಾರಂ ತುಂಬುವ ವೇಳೆ ಮತದಾರರ ಬಳಿ 2002ರ ಮತದಾರರ ಪಟ್ಟಿಯ ಮಾಹಿತಿ ಇದ್ದರೆ ತುಂಬಿ ಇಲ್ಲವೇ, ನಿಮ್ಮ ಇತ್ತೀಚಿನ ಮಾಹಿತಿ ತುಂಬಿ ಸಹಿ ಮಾಡಿ ಬಿಎಲ್‌ಓ ಗಳಿಗೆ ತಲುಪಿಸಿ,ಕರಡು ಪಟ್ಟಿಯಲ್ಲಿ ನಿಮ್ಮ ಹೆಸರು ಬಂದ ನಂತರ ನೋಟೀಷ್ ನೀಡಿ, ಸಂಬಂಧಪಟ್ಟ ದಾಖಲೆ ಪಡೆದು ಅಂತಿಮ ಪಟ್ಟಿಗೆ ಸೇರಿಸುವ ಪ್ರಕ್ರಿಯೆ ನಡೆಯಲಿದೆ.ಅಧಿಕಾರಿಗಳ ಪ್ರಕಾರ, ತುಮಕೂರು ನಗರ ವಿಧಾನಸಭಾ ಕ್ಷೇತ್ರದಲ್ಲಿ ಇನ್ನೂ ಕೇವಲ 3000 ಜನರಿಗೆ ಮಾತ್ರ ಎನ್ಮರೇಷನ್ ಫಾರಂ ನೀಡುವುದು ಬಾಕಿ ಇದೆ.ಮನೆ ಬದಲಾಯಿಸಿರುವವರು, ನಿಧನರಾಗಿರುವ ಮಾಹಿತಿಗಳು ಖಚಿತ ಪಡಿಸಿಕೊಳ್ಳಲು ಸ್ವಲ್ಪ ಸಮಯ ಹಿಡಿಯುತ್ತದೆ. ಹಾಗಾಗಿ ಅಧಿಕಾರಿಗಳು ಶೇ100 ರಷ್ಟು ಗುರಿ ಸಾಧಿಸುತ್ತಾರೆ ಎಂಬ ನಂಬಿಕೆ ನಮಗಿದೆ.ಪಾಲಿಕೆಯ ಚುನಾವಣಾ ಘಟಕ ತುಂಬ ಚನ್ನಾಗಿ ಕೆಲಸ ಮಾಡಿದೆ. ಹಾಗಾಗಿ ಇದರಲ್ಲಿ ಭಾಗಿಯಾಗಿರುವ ಪಾಲಿಕೆಯ ಅಧಿಕಾರಿಗಳಿಗೂ ಅಭಿನಂದನೆ ಸಲ್ಲಿಸುವುದಾಗಿ ಡಾ.ರಫೀಕ್ ಅಹಮದ್ ತಿಳಿಸಿದರು.ಈ ವೇಳೆ ಬಿಎಲ್‌ಓ ಆದ ದೀಪಿಕಾ, ಬಿಎಲ್‌ಎ02ಗಳಾದ ಜಾಕೀರ್ ಪಾಷ, ಹುಸ್ಮಾನ್ ಖಾನ್,ಫೈರೋಜ್ ಫಾರೂಕ್ ಮೆಹಬೂಬ್ ಪಾಷ,ಹಸ್ಮತ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಉಪ ಮುಖ್ಯಮಂತ್ರಿ ಅವರ ಜಿಲ್ಲಾ ಕಚೇರಿಯಲ್ಲಿ ಸಾರ್ವಜನಿಕರ ಅಹವಾಲು ಸ್ವೀಕಾರಕ್ಕೆ ಅಧಿಕಾರಿಯನ್ನು ನೇಮಿಸಿ

ಸೂರ್ಯಪ್ರಗತಿನ್ಯೂಸ್.ಕಾಂ

ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರ ಕಚೇರಿಯಲ್ಲಿ ಸಾರ್ವಜನಿಕರ ಅಹವಾಲು ಸ್ವೀಕಾರಕ್ಕೆ ಅಧಿಕಾರಿಯನ್ನು ನೇಮಿಸುವಂತೆ ಮನವಿ

ತುಮಕೂರು ಜಿಲ್ಲೆಯ ವಿವಿಧ ಭಾಗಗಳಿಂದ ಹಾಗೂ ರಾಜ್ಯದ ವಿವಿಧ ಜಿಲ್ಲೆಗಳಿಂದ ಸಾರ್ವಜನಿಕರು, ವಿವಿಧ ರಾಜಕೀಯ ಪಕ್ಷಗಳ ಮುಖಂಡರು ಮತ್ತು ಸಂಘ–ಸಂಸ್ಥೆಗಳ ಪ್ರತಿನಿಧಿಗಳು ತಮ್ಮ ಸಮಸ್ಯೆಗಳು ಹಾಗೂ ಮನವಿಗಳನ್ನು ಸಲ್ಲಿಸಲು ಮಾನ್ಯ ಡಾ. ಜಿ. ಪರಮೇಶ್ವರ್‌ವರು ಗೃಹ ಸಚಿವರಾಗಿದ್ದ ಅವಧಿಯಿಂದಲೇ ಗೃಹ ಸಚಿವರು ಕಚೇರಿಗೆ ಜನರು ಆಗಮಿಸುತ್ತಿದ್ದರು.

ಈ ಹಿಂದೆ ಕಚೇರಿಯಲ್ಲಿ ಅಧಿಕಾರಿಯಾಗಿದ್ದ ಡಾ. ಕೆ. ನಾಗಣ್ಣ ಅವರು ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಿ, ಸಂಬಂಧಿತ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸುವ ಮೂಲಕ ಜನರಿಗೆ ಸ್ಪಂದಿಸುತ್ತಿದ್ದರು. ಇದರಿಂದ ದೂರದ ಊರುಗಳಿಂದ ಆಗಮಿಸುವ ಜನರಿಗೆ ಅನುಕೂಲವಾಗುತ್ತಿತ್ತು.

ಪ್ರಸ್ತುತ ಮಾನ್ಯ ಡಾ. ಜಿ. ಪರಮೇಶ್ವರ್ ಅವರು ಉಪ ಮುಖ್ಯಮಂತ್ರಿಗಳಾಗಿ ಕಾರ್ಯನಿರ್ವಹಿಸುತ್ತಿರುವ ಸಂದರ್ಭದಲ್ಲಿ, ಕಚೇರಿಯಲ್ಲಿ ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಲು ಸಮರ್ಪಕ ಅಧಿಕಾರಿ ಇಲ್ಲದಿರುವ ಕಾರಣ, ದೂರದ ಹಳ್ಳಿಗಳಿಂದ ಆಗಮಿಸುವ



ಜನರು ತೊಂದರೆ ಅನುಭವಿಸುತ್ತಿದ್ದಾರೆ ಎಂಬ ಅಭಿಪ್ರಾಯ ಸಾರ್ವಜನಿಕ ವಲಯದಲ್ಲಿ ವ್ಯಕ್ತವಾಗುತ್ತಿದೆ.

ಆದ್ದರಿಂದ, ಈ ಹಿಂದೆ ಸೇವೆ ಸಲ್ಲಿಸಿದ್ದ ಡಾ. ಕೆ. ನಾಗಣ್ಣ ಅವರನ್ನು ಮರುನೇಮಕ ಮಾಡುವುದು ಅಥವಾ ಖಾಲಿ ಇರುವ ಹುದ್ದೆಗೆ ಸೂಕ್ತ ಅಧಿಕಾರಿಯನ್ನು ತ್ವರಿತವಾಗಿ ನೇಮಿಸಿ, ಸಾರ್ವಜನಿಕರ ಅಹವಾಲುಗಳಿಗೆ ಸ್ಪಂದಿಸುವ ವ್ಯವಸ್ಥೆಯನ್ನು ಕಲ್ಪಿಸುವಂತೆ ಮಾನ್ಯ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರಿಗೆ ಸಾರ್ವಜನಿಕರು ಮನವಿ ಮಾಡುತ್ತಿದ್ದಾರೆ

## ಎಸ್. ಜಾನಕಿಯವರಿಗೆ ಗೀತ ನಮನ



ಮಧುಗಿರಿ: ಗಾನಕೋ ಗಿಲೆಯೆಂದೆ ಖ್ಯಾತರಾಗಿದ್ದ ಗಾಯಕಿ ಎಸ್. ಜಾನಕಿಯವರಿಗೆ ಪಟ್ಟಣದ ಲಾಲಿತ್ಯ ಸಂಗೀತ ಶಾಲೆ ವತಿಯಿಂದ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಅವರು ಹಾಡಿದ ಜನಪ್ರಿಯ ಗೀತೆಗಳನ್ನು ಹಾಡುವ ಮೂಲಕ ಗೀತ ನಮನ ಸಲ್ಲಿಸಲಾಯಿತು.

ಗಾಯಕರಾದ ಲಲಿತಾಂಬ,ರಾಜೇಶ್ವರಿ ಗೀತೆಗಳನ್ನು ಹಾಡಿದರು. ಕಲಾ ರಂಗ ತಂಡದ ಕಾರ್ಯದರ್ಶಿ ಲಕ್ಷ್ಮಿ ನರಸಯ್ಯ ಮಾತನಾಡಿ 20ಕ್ಕೂ ಹೆಚ್ಚು ಭಾಷೆಗಳಲ್ಲಿ ಹಿನ್ನೆಲೆ ಗಾಯಕಿಯಾಗಿ 48 ಸಾವಿರಕ್ಕೂ ಅಧಿಕ ಹಾಡುಗಳಿಗೆ ಧ್ವನಿಯಾಗುವ ಮೂಲಕ ಭಾರತೀಯ ಸಂಗೀತ ಕ್ಷೇತ್ರದಲ್ಲಿ ಅಳಿಸಲಾಗದ ಛಾಪು ಮೂಡಿಸಿರುವ ಜಾನಕಿಯವರು ನೆರೆಯ ಆಂಧ್ರದಲ್ಲಿ ಹುಟ್ಟಿದರೂ, ಕನ್ನಡತಿಯಾಗಿ ನಮ್ಮೆಲ್ಲರ ಹೃದಯ ಗೆದ್ದಿದ್ದಾರೆ ಎಂದರು. ವೇದಾಂಬಿಕ, ತೇಜಸ್ವಿನಿ, ಶಾಂತಮ್ಮ, ದೀಪ, ಗೀತಾ ನಾಗರಾಜ್, ಹೇಮಾ, ಕುಸುಮ, ಭಾನುಪ್ರಕಾಶ್, ಗಂಗಾಧರ, ಶಂಕರ ನಾರಾಯಣ ಹಾಜರಿದ್ದರು.

## ಪ್ರಾಣಿಜನ್ಯ ರೋಗ : ಎಚ್ಚರಿಕೆ ಅಗತ್ಯ

ಮಧುಗಿರಿ: ಸಾಕು ಪ್ರಾಣಿಗಳಿಂದ ಎಚ್ಚರ ಹಾಗೂ ಅಂತರ ಕಾಪಾಡಿಕೊಳ್ಳಿ. ಅವುಗಳ ಮೈತೊಳೆದ ನಂತರ ಇಲ್ಲವೇ ಗಾಯಗಳಿಗೆ ಚಿಕಿತ್ಸೆ ನೀಡಿದ ನಂತರ ಕೈಗಳನ್ನು ಸ್ವಚ್ಛವಾಗಿ ತೊಳೆದುಕೊಳ್ಳಿ ಎಂದು ಎಪಿಡಮಾಲಜಿಸ್ಟ್ ಡಾ. ವಿದ್ಯಾಶ್ರೀ ಹೇಳಿದರು.

ಪಟ್ಟಣದ ಎಸ್.ಎಂ. ಆಂಗ್ಲ ಶಾಲೆಯಲ್ಲಿ ಈಚೆಗೆ ನಡೆದ ವಿಶ್ವ ಪ್ರಾಣಿ ಜನ್ಯ ರೋಗ ತಡೆಗಟ್ಟುವ ದಿನಾಚರಣೆಯಲ್ಲಿ ಮಾತನಾಡಿ, ಪ್ರಾಣಿಗಳಿಂದ ಹರಡುವ ರೋಗಗಳಾದ ಹಂದಿ ಜ್ವರ, ರೇಬಿಸ್, ಮಂಗನ ಕಾಯಿಲೆ,ಸಾರ್ಸ್, ಕೆ ಎಫ್ ಡಿ, ಬ್ರುಸೆಲ್ಲಾ, ಲ್ಯಾಪ್ಟೋಸ್ಪೆರೋಸಿಸ್ ಸೇರಿದಂತೆ ಹಲವು ರೋಗಗಳು ಮನುಷ್ಯನಿಗೆ ಹರಡುವ ಸಾಧ್ಯತೆ ಇರುತ್ತದೆ. ರೋಗಪೀಡಿತ ಪ್ರಾಣಿಗಳ ಸಂಪರ್ಕಕ್ಕೆ ಬಂದ ತಕ್ಷಣ, ಲಸಿಕೆ ಹಾಗೂ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಲ್ಲಿ ಇಂತಹ ರೋಗಗಳನ್ನು ತಡೆಗಟ್ಟಬಹುದು ಎಂದರು.

ಪ್ರತಿ ವರ್ಷ ಪ್ರಾಣಿಜನ್ಯ ರೋಗಗಳಿಂದಾಗಿ ಜಗತ್ತಿನಾದ್ಯಂತ 25 ಲಕ್ಷಕ್ಕೂ ಹೆಚ್ಚು ಜನ ಮರಣ ಹೊಂದುತ್ತಿದ್ದಾರೆ. ಮಕ್ಕಳು ಸಾಕುಪ್ರಾಣಿಗಳೊಂದಿಗೆ ಒಡನಾಟದಲ್ಲಿ ಸದಾ ಎಚ್ಚರದಿಂದಿರಬೇಕು.ನಾಯಿ ಹಾವು ಬೆಕ್ಕು, ಹಾವು ಇತರೆ ಪ್ರಾಣಿಗಳು ಕಚ್ಚಿದಾಗ ಪ್ರಥಮ ಚಿಕಿತ್ಸೆ ಮಾಡಿಕೊಳ್ಳುವುದರ ಜೊತೆಗೆ, ನಂಜು ನಿರೋಧಕ ಲಸಿಕೆಗಳಾದ ಎಆರ್ ವಿ, ಎಎಸ್ ವಿ ಲಸಿಕೆಗಳು ಉಚಿತವಾಗಿ ಸಿಗುವುದರಿಂದ ಇದರ ಸದ್ಬಳಕೆ ಮಾಡಿಕೊಳ್ಳಿ ಎಂದು ಹೇಳಿದರು. ಶುಶ್ರೂಷಕಿಯರಾದ ಸವಿತಾ, ಪುಟ್ಟಮ್ಮ, ರೂಪ ಶಾಲಾ ಮುಖ್ಯ ಶಿಕ್ಷಕ ಅಸ್ಗರ್ ನೈನ್, ಶಿಕ್ಷಕರಾದ ಚೈತನ್ಯ, ಕೋಮಲ,ಜ್ಯೋತಿ ಹಾಜರಿದ್ದರು

## ಶಾಲಾ ಮಕ್ಕಳಿಗೆ ತಾಲ್ಲೂಕು ಮಟ್ಟದ ರಸಪ್ರಶ್ನೆ ಸ್ಪರ್ಧೆ



ಮಧುಗಿರಿ: ಜಿ.ಪಂ.,ತಾ.ಪಂ.,ಬಾಲ ಭವನ ಸೊಸೈಟಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಾಲಾ ಶಿಕ್ಷಣ ಇಲಾಖೆ ವತಿಯಿಂದ ತಾಲ್ಲೂಕು ಮಟ್ಟದ ರಸಪ್ರಶ್ನೆ ಕಾರ್ಯಕ್ರಮವನ್ನು ಪಟ್ಟಣದ ಬಿ ಆರ್ ಸಿ ಕಚೇರಿಯಲ್ಲಿ ಆಯೋಜಿಸಲಾಗಿತ್ತು. ತೀರ್ಪುಗಾರ, ಗರಣಿ ಕ್ಲಸ್ಟರ್ ಸಿಆರ್ ಪಿ ಶ್ರೀಧರ್ ಸ್ಪರ್ಧೆಯ ನಿಯಮಗಳನ್ನು ತಿಳಿಸಿದರು.

ಪ್ರಾಥಮಿಕ ವಿಭಾಗದಲ್ಲಿ ದಬ್ಬೇಗಟ್ಟ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ – ಪ್ರಥಮ ಸ್ಥಾನ, ಹಾಗೂ ಪ್ರೌಢಶಾಲಾ ವಿಭಾಗದಲ್ಲಿ ಡಿವಿ ಹಳ್ಳಿ ಸರ್ಕಾರಿ ಪ್ರೌಢಶಾಲೆ ಪ್ರಥಮ ಸ್ಥಾನ ಗಳಿಸಿ ಜಿಲ್ಲಾ ಹಂತಕ್ಕೆ ಆಯ್ಕೆಯಾದವು.

ಪ್ರಾಥಮಿಕ ವಿಭಾಗದಲ್ಲಿ ಕೆಸಿ ರೊಪ್ಪ ಮೊರಾರ್ಜಿ ವಸತಿ ಶಾಲೆ ದ್ವಿತೀಯ, ಹಾಗೂ ಎಚ್. ಬಸವನಹಳ್ಳಿ ಶಾಲೆ ತೃತೀಯ ಸ್ಥಾನ ಪಡೆದರೆ, ಪ್ರೌಢಶಾಲೆ ವಿಭಾಗದಲ್ಲಿ ಮಧುಗಿರಿ ಪಟ್ಟಣದ ಕೆ. ಆರ್. ಬಡಾವಣೆ ಪ್ರೌಢಶಾಲೆ ದ್ವಿತೀಯ ಹಾಗೂ ಕೆಸಿ ರೊಪ್ಪ ಮೊರಾರ್ಜಿ ವಸತಿ ಶಾಲೆ ತೃತೀಯ ಸ್ಥಾನ ಗಳಿಸಿದವು.ವಿಜೇತ ತಂಡಗಳಿಗೆ ನಗದು ಬಹುಮಾನ ನೀಡಲಾಯಿತು.

## 'ಹೊಸ ಸೃಷ್ಟಿಗೆ ಜೀವತುಂಬುವ ಸೃಜನ ಶೀಲತೆ ಪ್ರತಿಭೆ'



ತುಮಕೂರು: ನಗರದ ರಸಧಾರ ಸ್ಕೂಲ್ ಆಫ್ ಆರ್ಟ್ಸ್‌ನ ವಾರ್ಷಿಕೋತ್ಸವ ಸಮಾರಂಭದಲ್ಲಿ ನೃತ್ಯ ಗತಿಪ್ರಣೀತ ವಿದ್ವಾನ್ ಮಂಜುನಾಥ ಎನ್. ಪುತ್ತೂರು ಅವರು ಆವಿಷ್ಕರಿಸಿರುವ ಭರತ ನಾಟ್ಯದ ನೂತನ 'ಜಗದ್ಗುರು ತಾಳಮ್'ನ ಪ್ರದರ್ಶನ ಏರ್ಪಡಿಸಲಾಗಿತ್ತು. ಈ ವೇಳೆ ಮಾತನಾಡಿದ ಮಂಜುನಾಥ ಪುತ್ತೂರು, ಹೊಸ ಸೃಷ್ಟಿಗೆ ಜೀವ ತುಂಬುವುದೇ ಪ್ರತಿಭೆ. ಈ ಅಪೂರ್ವ ಸೃಜನಶೀಲತೆಯನ್ನು ವಿದ್ಯಾರ್ಥಿಗಳು ಬೆಳೆಸಿಕೊಳ್ಳಬೇಕು .ಸತತ ಅಭ್ಯಾಸ, ಪರಿಶ್ರಮದಿಂದ ಕಲೆಯನ್ನು ಒಲಿಸಿಕೊಳ್ಳಬಹುದು ಎಂದು ಹೇಳಿದರು.

ರಸಧಾರಾ ಭರತನಾಟ್ಯ ಶಾಲೆಯ ನಿರ್ದೇಶಕಿ ಕುಮಾರಿ ಸುಷ್ಮಾ ಪ್ರಸಾದ್ ಮಾತನಾಡಿ, ವಿದ್ವಾನ್ ಮಂಜುನಾಥಎನ್. ಪುತ್ತೂರು ಅವರು, ಭರತ ನಾಟ್ಯ ಕ್ಷೇತ್ರಕ್ಕೆತಮ್ಮ ವಿಶಿಷ್ಟ ಕೊಡುಗೆಯಾಗಿ ಅವರು 'ಜಗದ್ಗುರು ತಾಳಮ್' ಎಂಬ ನೂತನ ತಾಳ ವ್ಯವಸ್ಥೆಯನ್ನು ಆವಿಷ್ಕರಿಸಿದ್ದಾರೆ. ಈ ತಾಳದಲ್ಲಿ ಅವರು ಅನೇಕ ಮನೋಹರ ನೃತ್ಯ ಸಂಯೋಜನೆಗಳನ್ನು ರಚಿಸಿದ್ದು, ಅವುಗಳಲ್ಲಿ ಪ್ರಮುಖವಾದವುಗಳೆಂದರೆ ಗಣೇಶ ಪುಷ್ಪಾಂಜಲಿ, ಜಗದ್ಗುರು ಅಲಾರಿಪು, ತ್ರಿದೇವೀ ಕವಿತ್ವಮ್, ಪದವರ್ಣನಮ್, ಕೃಷ್ಣ ಭಜನ್, ಜಾವಳಿ – ವಿರಹೋತ್ಕಂಠಿತ,ಜಗದ್ಗುರುತಿಲ್ಲಾನ ಹಾಗೂ ಮಂಗಲಮ್‌ಎಂದು ಹೇಳಿದರು.

### ಕ್ರೀಡಾ ಪಟುಗಳಿಗೆ ಹಾಜರಾತಿಯಲ್ಲಿ ವಿನಾಯಿತಿ ; ಪರೀಕ್ಷೆ ಬರೆಯಲು ತೊಂದರೆಯಾಗದಂತೆ ಕ್ರಮ

# ರಾಜ್ಯದ 32 ಕಡೆಗಳಲ್ಲಿ 36 ಕೋಟಿ ವೆಚ್ಚದಲ್ಲಿ ಕ್ರೀಡಾಂಗಣಗಳ ಅಭಿವೃದ್ಧಿ

ಸೂರ್ಯಪ್ರಗತಿನ್ಯೂಸ್.ಕಾಂ



ಕ್ರೀಡಾ ಸಾಧಕರಿಗೆ ಉದ್ಯೋಗ ಮೀಸಲಾತಿ ; ವಿಶೇಷ ಪ್ರೋತ್ಸಾಹಧನ

ಕಳೆದ 2 ವರ್ಷಗಳಿಂದ ಬಾಕಿ ಇರುವ ಕ್ರೀಡಾಪ್ರಶಸ್ತಿಗಳನ್ನು ಆಗಸ್ಟ್ 29ರಂದು ವಿತರಿಸಲಾಗುವುದು : ಡಾ.ಜಿ.ಪರಮೇಶ್ವರ

ಬೆಂಗಳೂರು,: ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಮಾಜದಲ್ಲಿ ಪ್ರಮುಖ ಪಾತ್ರವಹಿಸುತ್ತದೆ. ಒಟ್ಟು ಜನಸಂಖ್ಯೆಯಲ್ಲಿ ಶೇ.65ರಷ್ಟು ಜನರು 35 ವರ್ಷಕ್ಕಿಂತ ಕಡಿಮೆ ವಯೋಮಿತಿಯವರಿದ್ದಾರೆ. ಅವರನ್ನು ರಾಜ್ಯದ ಮತ್ತು ರಾಷ್ಟ್ರದ ಅಭಿವೃದ್ಧಿಗೆ ತೊಡಗಿಸಿಕೊಳ್ಳಬೇಕು. ಪದವಿ ಪಡೆಯುವುದರೊಳಗೆ ಮತದಾರರ ಹಕ್ಕು ಪಡೆಯುವ ಅವರಿಂದ ಸಮಾಜದ ಅಭಿವೃದ್ಧಿಗೆ ಉಪಕಾರಿಯಾಗುವಂತಹ ಕೆಲಸ ಆಗಬೇಕು. ಈ ನಿಟ್ಟಿನಲ್ಲಿ ನಮ್ಮ ಇಲಾಖೆಯು ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ ಎಂದು ಉಪ ಮುಖ್ಯಮಂತ್ರಿಗಳಾದ ಡಾ.ಜಿ.ಪರಮೇಶ್ವರ ಅವರು ತಿಳಿಸಿದರು.

ಬೆಂಗಳೂರಿನ ನೃಪತುಂಗ ರಸ್ತೆಯ ಯವನಿಕಾ ಸಭಾಂಗಣದಲ್ಲಿ ಮಾಧ್ಯಮಗೋಷ್ಠಿನಡೆಸಿ ಮಾತನಾಡಿದ ಅವರು, ರಾಜ್ಯ ಮತ್ತು ರಾಷ್ಟ್ರಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಹಾಜರಾತಿಯಲ್ಲಿ ಶೇ. 15 ರಷ್ಟು ವಿನಾಯಿತಿ, ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಪಾಲ್ಗೊಳ್ಳುವ ವಿದ್ಯಾರ್ಥಿಗಳಿಗೆ ಶೇ. 25ರಷ್ಟು ಹಾಜರಾತಿ ವಿನಾಯಿತಿ ನೀಡಲಾಗುವುದು. ಇದನ್ನು ಕೂಡಲೇ ಅನುಷ್ಠಾನಗೊಳಿಸಲಾಗಿದ್ದು, ಸರ್ಕಾರಿ ಆದೇಶ ಹೊರಡಿಸಿರುವುದಾಗಿ ತಿಳಿಸಿದರು.

ವಿದ್ಯಾರ್ಥಿಗಳ ಹಾಜರಾತಿ ಶೇ. 50ರಷ್ಟು ಇದ್ದರೂ ಪರೀಕ್ಷೆ ಬರೆಯಲು ಅವಕಾಶ ನೀಡಬೇಕು. ವಿದ್ಯಾರ್ಥಿಗಳು ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಭಾಗವಹಿಸುತ್ತಾರೆ. ಅಂಥವರಿಗೆ ಹಾಜರಾತಿ ಬಂದಿರುವುದಿಲ್ಲ. ಇದು ನನ್ನ ಸ್ವಂತ ಅನುಭವವೂ ಹೌದು. ಹಾಗಾಗಿ ಯಾವುದೇ ವಿದ್ಯಾರ್ಥಿಗಳು ಪರೀಕ್ಷೆಯಿಂದ ವಂಚಿತರಾಗಬಾರದು. ಈ ಉದ್ದೇಶದಿಂದ ಕ್ರೀಡಾಪಟು ವಿದ್ಯಾರ್ಥಿಗಳಿಗೆ ಹಾಜರಾತಿಯಲ್ಲಿ ವಿನಾಯಿತಿ ಅವಕಾಶ ಕಲ್ಪಿಸಲಾಗಿದೆ. ಒಟ್ಟು 34 ವಿವಿಧ ಕ್ರೀಡೆಗಳಲ್ಲಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಹಾಜರಾತಿ ವಿನಾಯಿತಿ ನೀಡಲಾಗಿದ್ದು, ಕ್ರೀಡಾಕೂಟಗಳ ಪಟ್ಟಿಯನ್ನೂ ಸಹ ಒದಗಿಸಲಾಗಿದೆ ಎಂದು ವಿವರಿಸಿದರು.



ಸರ್ಕಾರವು ರಾಜ್ಯದ ಸಾಧಕ ಕ್ರೀಡಾಪಟುಗಳಿಗೆ ಉದ್ಯೋಗಾವಕಾಶ ನೀಡಲು ಹೆಚ್ಚಿನ ಆದ್ಯತೆ ನೀಡುತ್ತಿದೆ. ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ಖಾಲಿ ಇರುವ 72 ಸಾವಿರ ಹುದ್ದೆಗಳ ಭರ್ತಿಗೆ ಮುಂದಾಗಿದೆ. ಶೇ.2 ರಷ್ಟು ಹುದ್ದೆಗಳನ್ನು ಕ್ರೀಡಾಪಟುಗಳಿಗೆ ಮೀಸಲಿಡಲು ಸಚಿವ ಸಂಪುಟ ಅನುಮೋದನೆ ನೀಡಿದ್ದು, ಕರಡು ಅಧಿಸೂಚನೆಯನ್ನು ಹೊರಡಿಸಲಾಗಿದೆ. ಸಾರ್ವಜನಿಕರ ಮತ್ತು ಕ್ರೀಡಾಪಟುಗಳ ಆಕ್ಷೇಪಣೆ ಮತ್ತು ಸಲಹೆಗಳನ್ನು ಪರಿಶೀಲಿಸಿ, ಶೀಘ್ರ ಅಂತಿಮ ಅಧಿಸೂಚನೆ ಹೊರಡಿಸಲಾಗುವುದು ಎಂದರು.

ಮುಂದುವರೆದು ಮಾತನಾಡಿ, 72 ಸಾವಿರ ಹುದ್ದೆಗಳ ನೇಮಕಾತಿಯಲ್ಲಿ ಶೇ.2 ರಷ್ಟು ಕ್ರೀಡಾ ಮೀಸಲಾತಿ ಪ್ರಕಾರ 2 ಸಾವಿರ ಹುದ್ದೆಗಳು ಕ್ರೀಡಾಪಟುಗಳಿಗೆ ಲಭ್ಯವಾಗಲಿದೆ. ಕಾಮನ್‌ವೆಲ್ತ್ ಗೇಮ್ಸ್, ಏಷ್ಯನ್ ಗೇಮ್ಸ್ ಮತ್ತು ಏಷ್ಯನ್ ಪ್ಯಾರಾ ಗೇಮ್ಸ್‌ಗಳಲ್ಲಿ ಪದಕ ವಿಜೇತ ಸಾಧಕ ಕ್ರೀಡಾಪಟುಗಳಿಗೆ 'ಎ' ಮತ್ತು 'ಬಿ' ಗುಂಪಿನ ಹುದ್ದೆಗಳನ್ನು ವಿಶೇಷ ನೇಮಕಾತಿಯಡಿ ಭರ್ತಿ ಮಾಡುತ್ತಿದೆ. ಈಗಾಗಲೇ 13 ಕ್ರೀಡಾಪಟುಗಳಿಗೆ ಆದೇಶ ಪತ್ರಗಳನ್ನು ನೀಡಿದ್ದು, 11 ಜನ ವರದಿ ಮಾಡಿಕೊಂಡಿದ್ದಾರೆ ಎಂದು ತಿಳಿಸಿದರು.

ಕಾಮನ್‌ವೆಲ್ತ್ ಗೇಮ್ಸ್, ಏಷ್ಯನ್ ಗೇಮ್ಸ್ ಮತ್ತು ಏಷ್ಯನ್ ಪ್ಯಾರಾ ಗೇಮ್ಸ್‌ಗಳಲ್ಲಿ ಕರ್ನಾಟಕವನ್ನು ಪ್ರತಿನಿಧಿಸುವ ಕ್ರೀಡಾಪಟುಗಳಿಗೆ ರೂ. 5 ಲಕ್ಷ ವಿಶೇಷ ಪ್ರೋತ್ಸಾಹಧನ ನೀಡಲಾಗುವುದು. ಈ ಮೊತ್ತವು ಪದಕ ವಿಜೇತರಿಗೆ ನೀಡಲಾಗುವ ನಗದು ಪುರಸ್ಕಾರ ಮೊತ್ತಕ್ಕೆ ಹೆಚ್ಚುವರಿಯಾಗಿದೆ. ಕ್ರೀಡಾ ಇಲಾಖೆಯಲ್ಲಿ ಖಾಲಿ ಇರುವ ತರಬೇತುದಾರರ ಹುದ್ದೆಯ ಭರ್ತಿಗೆ ಆರ್ಥಿಕ ಇಲಾಖೆಯು ಅನುಮೋದನೆ ನೀಡಿದ್ದು, 50 ಖಾಯಂ ತರಬೇತುದಾರರ ಹುದ್ದೆಗಳ ಶೀಘ್ರ ನೇಮಕಾತಿಗೆ ಕ್ರಮ ವಹಿಸಲಾಗುವುದು ಎಂದರು.

ಮೊಟ್ಟ ಮೊದಲ ಬಾರಿಗೆ 'ಅಂತಾರಾಷ್ಟ್ರೀಯ ಮಟ್ಟದ ಯುವ ಜನೋತ್ಸವ'ವನ್ನು ಆಯೋಜಿಸಲು ಚಿಂತನೆ ನಡೆಸುತ್ತಿದ್ದೇವೆ. ನಮ್ಮ ಸಂಸ್ಕೃತಿ, ಕ್ರೀಡೆ ಮತ್ತು ಯುವಕರ ವಿಚಾರಧಾರೆಗಳನ್ನು ಅಳವಡಿಸಿ ಹಬ್ಬ ಮಾಡಲಾಗುವುದು. ಡಿಸೆಂಬರ್ ಅಥವಾ ಜನವರಿಯಲ್ಲಿ ಆಯೋಜಿಸಲಾಗುವುದು. ಪ್ರಸಕ್ತ ವರ್ಷದಿಂದ ತಾಲ್ಲೂಕು ಮಟ್ಟದಿಂದಲೇ ಅತ್ಯಂತ ವ್ಯವಸ್ಥಿತವಾಗಿ ದಸರಾ ಕ್ರೀಡಾಕೂಟಗಳನ್ನು ಆಯೋಜಿಸಲಾಗುವುದು ಎಂದು ಹೇಳಿದರು.

ರಾಜ್ಯದಲ್ಲಿ 32 ಕಡೆ 36 ಕೋಟಿ ವೆಚ್ಚದಲ್ಲಿ ಕ್ರೀಡಾಂಗಣಗಳನ್ನು ಅಭಿವೃದ್ಧಿ ಮಾಡುತ್ತಿದ್ದೇವೆ. ಈ ಬಾರಿಯ ಬಜೆಟ್‌ನಲ್ಲೂ ಹಲವು ಕಾರ್ಯಕ್ರಮಗಳನ್ನು ತೆಗೆದುಕೊಂಡಿದ್ದೇವೆ ಎಂದ ಅವರು, ಉನ್ನತ ಶಿಕ್ಷಣ ಸಚಿವನಾಗಿದ್ದ ವೇಳೆ ಮೊದಲ ಬಾರಿಗೆ ಸಿಇಟಿಯಲ್ಲಿ ಕ್ರೀಡಾಪಟುಗಳಿಗೆ ಮೀಸಲಾತಿ ನೀಡಲಾಗಿತ್ತು. ಈ ವರ್ಷ 115 ವಿದ್ಯಾರ್ಥಿಗಳಿಗೆ ಮೆಡಿಕಲ್ ಮತ್ತು ಇಂಜಿನಿಯರಿಂಗ್ ಸೀಟುಗಳು ಸಿಕ್ಕಿದೆ ಎಂದು ತಿಳಿಸಿದರು.

ನಮ್ಮ ಸರ್ಕಾರ ಕ್ರೀಡಾ ಚಟುವಟಿಕೆಗಳನ್ನು ಉತ್ತೇಜಿಸಲು ದೊಡ್ಡ ಹೆಜ್ಜೆ ಇರಿಸಿದೆ. ಕಂಠೀರವ ಕ್ರೀಡಾಂಗಣವನ್ನು ಪುನರ್ ಅಭಿವೃದ್ಧಿ ಮಾಡಲಾಗುವುದು. ಅಂತಾರಾಷ್ಟ್ರೀಯ ಮಟ್ಟದ ಮೂಲಸೌಕರ್ಯ ಒದಗಿಸುವ ನಿಟ್ಟಿನಲ್ಲಿ ಪಿಪಿಪಿ ಮಾದರಿಯಲ್ಲಿ ಅಭಿವೃದ್ಧಿಪಡಿಸಲಾಗುವುದು. ಜೊತೆಗೆ ಕಾಮನ್‌ವೆಲ್ತ್ ಗೇಮ್ಸ್ ಅಥವಾ ಅಂತಾರಾಷ್ಟ್ರೀಯ ಮಟ್ಟದ ಕ್ರೀಡೆಗಳನ್ನು ಆಯೋಜಿಸಲು ಬೇಕಾದ ಮೂಲಸೌಕರ್ಯಗಳನ್ನು ಒದಗಿಸಲಾಗುವುದು. ಕ್ಯಾಬಿನೆಟ್‌ನಲ್ಲಿ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು ಎಂದು ಮಾಹಿತಿ ನೀಡಿದರು.ಲೋಕಸಭಾ ವಿರೋಧ ಪಕ್ಷದ ನಾಯಕರಾದ ಶ್ರೀ ರಾಹುಲ್ ಗಾಂಧಿಯವರು ದೇಶದ ಯುವಜನತೆಗೆ ಭಾರತದ ಬಹುತ್ವದ ಸಂಸ್ಕೃತಿ, ಮತ್ತು ಇತಿಹಾಸದ ಸಂದೇಶವನ್ನು ತಲುಪಿಸುವ ಉದ್ದೇಶದಿಂದ ಕನ್ಯಾಕುಮಾರಿಯಿಂದ ಕಾಶ್ಮೀರದವರೆಗೆ ಸುಮಾರು 3,570 ಕಿ.ಮೀ. ಗಳಷ್ಟು ಭಾರತ್ ಜೋಡೋ ಯಾತ್ರೆಯನ್ನು ಕೈಗೊಂಡಿದ್ದರು. ಅದರ ನೆನಪಿಗಾಗಿ ವಿಶೇಷ ಕಾರ್ಯಕ್ರಮವನ್ನು ಘೋಷಿಸುವುದಾಗಿ ನಾವು ಪ್ರಣಾಳಿಕೆಯಲ್ಲಿ ಭರವಸೆ ನೀಡಿದ್ದೆವು. ಅದರಂತೆ ಭಾರತ್ ಜೋಡೋ ಯುವ ಸಂಘವನ್ನು ಆರಂಭಿಸುತ್ತಿದ್ದೇವೆ. ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಅವರು ಮೊದಲ ಸಚಿವ ಸಂಪುಟ ಸಭೆಯಲ್ಲಿ ಈ ಬಗ್ಗೆ ತೀರ್ಮಾನ ತೆಗೆದುಕೊಂಡಿದ್ದಾರೆ. ಯುವಕರನ್ನು ಆಯ್ಕೆ ಮಾಡಿ ಭಾರತ್ ಜೋಡೋ ಸಂಘ ಮಾಡಲು ಸರ್ಕಾರಿ ಆದೇಶ ಹೊರಡಿಸಲಾಗಿದೆ ಎಂದು ಈ ಸಂದರ್ಭದಲ್ಲಿ ವಿವರಿಸಿದರು.

ಮುಂದುವರೆದು ಮಾತನಾಡಿ, ಕ್ರೀಡಾ ಇಲಾಖೆಗೆ ಈ ಜವಾಬ್ದಾರಿ ನೀಡಿದ್ದಾರೆ. ಒಂದೊಂದು ಪಂಚಾಯಿತಿಯಲ್ಲಿ 200 ಜನರನ್ನೊಳಗೊಂಡಂತೆ 10 ಸಾವಿರ ಸಂಘಗಳನ್ನು ಮಾಡಿ, ಒಂದು ಸಂಘಕ್ಕೆ ವರ್ಷಕ್ಕೆ 10 ಲಕ್ಷ ರೂ. ನೀಡಲಾಗುವುದು. ಇದರ ಪರಿಶೀಲನೆಗೆ ನೋಡಲ್ ಅಧಿಕಾರಿಯನ್ನು ನೇಮಿಸಲಾಗುತ್ತದೆ. ರಾಷ್ಟ್ರದ ಇತಿಹಾಸ, ಸಂಸ್ಕೃತಿ, ಸಾಹಿತ್ಯ ಸೇರಿದಂತೆ ಇತರೆ ಚಟುವಟಿಕೆಗಳ ಮೂಲಕ ಯುವಕರನ್ನು ಒಗ್ಗೂಡಿಸುವ ಕೆಲಸ ಮಾಡಬೇಕು. ಇದನ್ನು ಫ್ಲ್ಯಾಗ್‌ಶಿಪ್ ಪ್ರೋಗ್ರಾಮ್ ರೀತಿಯಲ್ಲಿ ಘೋಷಿಸಲಾಗಿದೆ. ಇದಕ್ಕೆ1,010 ಕೋಟಿ ರೂ. ಮೀಸಲಿಡಲಾಗಿದೆ ಎಂದರು.

ಕಳೆದ ಎರಡು ವರ್ಷದಿಂದ ಏಕಲವ್ಯ, ಕ್ರೀಡಾ ರತ್ನ, ಕ್ರೀಡಾ ಪೋಷಕ ಮತ್ತು ಜೀವಮಾನ ಸಾಧನೆ ಪ್ರಶಸ್ತಿಗಳನ್ನು ನೀಡಿಲ್ಲ. ಈ ಪ್ರಶಸ್ತಿಗಳನ್ನು ಆಗಸ್ಟ್ 29, ಹಾಕಿ ಮಾಂತ್ರಿಕ ಧ್ಯಾನ್‌ಚಂದ್ ಅವರ ಜನ್ಮದಿನದಂದು ವಿತರಿಸಲಾಗುವುದು ಎಂದು ಈ ವೇಳೆ ತಿಳಿಸಿದರು.

## ಮಕ್ಕಳಿಗೆ ಅಸಾಧಾರಣ ಜಿಲ್ಲಾ ಮಟ್ಟದ ಪ್ರಶಸ್ತಿ : ಅರ್ಜಿ ಆಹ್ವಾನ

ತುಮಕೂರು:ಮಹಿಳಾಮತ್ತುಮಕ್ಕಳಅಭಿವೃದ್ಧಿಇಲಾಖೆಯು ಯಾವುದೇ ಕ್ಷೇತ್ರದಲ್ಲಿ ನಾವೀನ್ಯತೆ(Innovation), vÁQðPÀ(Scholastic) ಸಾಧನೆ, ಕ್ರೀಡೆ, ಕಲೆ, ಸಾಂಸ್ಕೃತಿಕ ಮತ್ತು ಸಂಗೀತ ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆ ಮಾಡಿರುವ 5 ರಿಂದ 18 ವರ್ಷದೊಳಗಿನ ಮಕ್ಕಳನ್ನು ಗುರುತಿಸಿ ಪ್ರತಿ ಕ್ಷೇತ್ರದಲ್ಲಿ ಇಬ್ಬರಿಗೆ ಜಿಲ್ಲಾ ಮಟ್ಟದ ಪ್ರಶಸ್ತಿಯನ್ನು ನೀಡಲು ಅರ್ಜಿ ಆಹ್ವಾನಿಸಿದೆ.

ಪ್ರಶಸ್ತಿಯು 10,000 ರೂ.ಗಳ ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿರುತ್ತದೆ. ಈ ಪ್ರಶಸ್ತಿಗೆ ಆಯ್ಕೆಯಾಗುವ ಮಕ್ಕಳು ಅಪ್ರತಿಮ ಪ್ರತಿಭೆಯುಳ್ಳವರಾಗಿಬೇಕು. ಅರ್ಜಿಯನ್ನು ಕನ್ನಡ ಭಾಷೆಯಲ್ಲಿ ಭರ್ತಿ ಮಾಡಿ ಅರ್ಜಿಯೊಂದಿಗೆ ಮಕ್ಕಳ ವಯಸ್ಸಿನ ಪ್ರಮಾಣ ಪತ್ರವನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿ ಸಲ್ಲಿಸಬೇಕು. ಪ್ರತಿಭೆ ಹೊಂದಿರುವ ಬಗ್ಗೆ ಪ್ರಮುಖ ದಿನಪತ್ರಿಕೆಯಲ್ಲಿ ಪ್ರಕಟಗೊಂಡಿರುವ ಪತ್ರಿಕಾ ತುಣುಕು/ ಪ್ರಮಾಣ ಪತ್ರಗಳನ್ನು ಲಗತ್ತಿಸಬೇಕು. ಅಂತರಾಷ್ಟ್ರೀಯ/ರಾಷ್ಟ್ರೀಯ/ ರಾಜ್ಯ ಮಟ್ಟದಲ್ಲಿ ಭಾಗವಹಿಸಿರುವ/ ಪ್ರಶಸ್ತಿ ಪಡೆದಿರುವ ಮಾಹಿತಿಯನ್ನು ಲಗತ್ತಿಸಬೇಕು. ಹಿಂದಿನ ವರ್ಷಗಳಲ್ಲಿ ಜಿಲ್ಲಾ ಮಟ್ಟದಲ್ಲಿ ಪ್ರಶಸ್ತಿ ಪಡೆದ ಮಕ್ಕಳಿಗೆ ಪುನಃ ಪ್ರಶಸ್ತಿ ನೀಡಲು ಅವಕಾಶವಿರುವುದಿಲ್ಲ. ಸಾಧಿಸಿರುವ ಪ್ರತಿಭೆಯನ್ನು ಸಮರ್ಥಿಸಲು ಪೂರಕ ದಾಖಲಾತಿಗಳನ್ನು ಸಲ್ಲಿಸತಕ್ಕದ್ದು.ಭರ್ತಿ ಮಾಡಿದ ಅರ್ಜಿಯನ್ನು ಜುಲೈ 31ರೊಳಗಾಗಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲಭವನ ಆವರಣ, ಎಂ.ಜಿ.ರಸ್ತೆ, ತುಮಕೂರು ಇವರಿಗೆ ಸಲ್ಲಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಡಾ: ಎಸ್. ಸಿದ್ದರಾಮಣ್ಣ ಪ್ರಕಟಣೆಯಲ್ಲಿ

## ಪಾಲಿಕೆ ಆವರಣದ ಅಂಬೇಡ್ಕರ್ ಪ್ರತಿಮೆ ಮುಂದೆ ಇಪಿಎಸ್– 95 ಪಿಂಚಣಿದಾರರ ಪ್ರತಿಭಟನೆ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಇಪಿಎಸ್–95 ಪಿಂಚಣಿದಾರರು ಕೇಂದ್ರ ಸರ್ಕಾರದ ಮುಂದೆ ತಮ್ಮ ಬೇಡಿಕೆ ಈಡೇರಿಕೆಗಾಗಿ ಕಳೆದ ಹತ್ತು ವರ್ಷಗಳಿಂದ ಮನವಿ ಮಾಡ್ತಿದ್ದಾರೆ. ಬೇಡಿಕೆ ಈಡೇರಿಸುವಂತೆ ಹೋರಾಟವನ್ನೂ ಮಾಡಿದ್ದಾರೆ. ಆದರೆ, ಕೇಂದ್ರಸರ್ಕಾರ ಮಾತ್ರ ಇಪಿಎಸ್ –95 ಪಿಂಚಣಿದಾರರ ಬೇಡಿಕೆ ಈಡೇರಿಸುವಲ್ಲಿ ಮುಂದಾಗಿಲ್ಲ ಎಂಬ ಆಕ್ರೋಶದ ಕಿಚ್ಚು ಪಿಂಚಣಿದಾರರಿಂದ ಕೇಳಿಬಂದಿದೆ. ಹತ್ತು ವರ್ಷಗಳಿಂದಲೂ ಬೇಡಿಕೆ ಈಡೇರದ ಹಿನ್ನೆಲೆಯಲ್ಲಿ ಪಿಂಚಣಿದಾರರು ಹೋರಾಟಕ್ಕಿಳಿಯುವ ಪರಿಸ್ಥಿತಿ ಅನಿವಾರ್ಯವಾಗಿದ್ದು, ಇದರ ಭಾಗವಾಗಿ ತುಮಕೂರಿನ ಇಪಿಎಸ್– 95 ಪಿಂಚಣಿದಾರರು ತುಮಕೂರಿನ ಪಾಲಿಕೆ ಆವರಣದ ಅಂಬೇಡ್ಕರ್ ಪ್ರತಿಮೆ ಮುಂದೆ ತಮ್ಮ ಪ್ರತಿಭಟನೆ ಮಾಡಿ ಕೇಂದ್ರ ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದರು. ಎನ್ ಎಸ್ ಇ ಸಹ



ಕಾರ್ಯದರ್ಶಿ ಕೆ.ಎಸ್.ರಾಜಣ್ಣ ಅವರು ಪ್ರತಿಭಟನೆ ಮಾತನಾಡುತ್ತಾ ಇಪಿಎಸ್–95 ಪಿಂಚಣಿದಾರರು ಕನಿಷ್ಠ ಮಾಸಿಕ ಪಿಂಚಣಿಯನ್ನು 7500 ಕ್ಕೆ ಹೆಚ್ಚಿಸಬೇಕು. ವಿಧವಾ ಪಿಂಚಣಿ ಕೊಡಬೇಕು ಎಂಬುದು ಸೇರಿದಂತೆ ನಾನಾ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿದರು. ಕಳೆದ 10 ವರ್ಷಗಳಿಂದ ಪಿಂಚಣಿದಾರರು ನಿರಂತರ ಹೋರಾಟ ನಡೆಸುತ್ತಾ, ತಮ್ಮ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದಿದ್ದರೂ ಯಾವುದೇ ಶಾಶ್ವತ ಪರಿಹಾರ ಸಿಕ್ಕಿಲ್ಲ. ಅಲ್ಪ ಪ್ರಮಾಣದ ಪಿಂಚಣಿ ಹಾಗೂ ಸಮರ್ಪಕ ವೈದ್ಯಕೀಯ ಸೌಲಭ್ಯಗಳ ಕೊರತೆಯಿಂದ ಪಿಂಚಣಿದಾರರ ಸಂಕಷ್ಟ ಹೆಚ್ಚುತ್ತಿದೆ. ಕೂಡಲೇ ಸರ್ಕಾರ ನಮ್ಮ ಸಮಸ್ಯೆ ಈಡೇರಿಸಬೇಕು. ಇಲ್ಲವಾದಲ್ಲಿ ನಾವು ರಾಷ್ಟ್ರಪತಿಗೆ ದಯಾಮರಣ ಕೋರುತ್ತೇವೆ ಎಂದು ಪ್ರತಿಭಟನೆ ಮೂಲಕ ಆಗ್ರಹಿಸಿದ್ದಾರೆ.

ಎನ್ ಎಸ್ ಇಜಿಲ್ಲಾಧ್ಯಕ್ಷ ರಮೇಶ್ ಮಾತನಾಡುತ್ತಾ ಕೇಂದ್ರ ಸರ್ಕಾರಕ್ಕೆ ಹಲವು ಬಾರಿ ಮನವಿ ಮಾಡಿ ಹೋರಾಟ ಮಾಡಿದ್ದೇವೆ. ಆದರೂ, ಕೇಂದ್ರ ಸರ್ಕಾರ ನಮ್ಮ ಬೇಡಿಕೆ ಬಗ್ಗೆ ಒಂದಿಷ್ಟು ಗಮನ ಕೊಡುತ್ತಿಲ್ಲ. ಹೀಗೆ ಆದರೆ ನಾವು ಉಗ್ರವಾದ ಹೋರಾಟ ಮಾಡಬೇಕಾದ ಅನಿವಾರ್ಯತೆ ಎದುರಾಗಲಿದೆ ಎಂದು ಇಪಿಎಸ್– 95 ಪಿಂಚಣಿದಾರರು ಕೇಂದ್ರಸರ್ಕಾರಕ್ಕೆ ಎಚ್ಚರಿಕೆ ನೀಡಿದರು.

ಎನ್ಎಸ್ಇ ಉಪಾಧ್ಯಕ್ಷ ಪ್ರಭಾಕರ್ ಮಾತನಾಡುತ್ತಾ ಇಪಿಎಸ್– 95 ಪಿಂಚಣಿದಾರರು ಕೇಂದ್ರ ರೈಲ್ವೆ ರಾಜ್ಯ ಖಾತೆ ಸಚಿವ ವಿ. ಸೋಮಣ್ಣ ಮೂಲಕ ಕೇಂದ್ರಸರ್ಕಾರಕ್ಕೆ ತಮ್ಮ ಬೇಡಿಕೆ ಮುಂದಿಡಲು ಮುಂದಾಗಿ ಸಚಿವ ಕಚೇರಿ ಮುಂದೆ ಪ್ರತಿಭಟನೆಗೆ ಮುಂದಾದರು. ಆದರೆ, ಅವಕಾಶ ಸಿಗದೇ ತುಮಕೂರು ಟೌನ್ ಹಾಲ್ ನಲ್ಲಿಯೇ ಪ್ರತಿಭಟನೆ ನಡೆಸಿ ತಮ್ಮ ಆಕ್ರೋಶ ಹೊರಹಾಕಿದರು. ಈ ವೇಳೆ ಎನ್.ಎ.ಸಿ.,ಈ.ಪಿ.ಎಸ್ 95 ಜಿಲ್ಲಾಧ್ಯಕ್ಷ ರಮೇಶ್, ಉಪಾಧ್ಯಕ್ಷ ಪ್ರಭಾಕರ್, ಸಹ ಕಾರ್ಯದರ್ಶಿ ಕೆ.ಎಸ್. ರಾಜಣ್ಣ, ಪುಟ್ಟರಾಜು,ದೊಡ್ಡೆಗೌಡ, ನಾಗರಾಜು ಸೇರಿದಂತೆ ನೂರಾರು ಪಿಂಚಣಿದಾರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ವಿಶೇಷ ಚೇತನರ ಸ್ವಾವಲಂಬಿ ಬದುಕಿಗೆ ಆಸರೆಯಾಗಲಿ ಈ ತ್ರಿಚಕ್ರ ವಾಹನಗಳು

ಸೂರ್ಯಪ್ರಗತಿನ್ಯೂಸ್.ಕಾಂ

ಚಿಕ್ಕನಾಯಕನಹಳ್ಳಿ:–ಪಟ್ಟಣದ 36 ಜನರಿಗೆ ತ್ರಿಚಕ್ರ ವಾಹನಗಳನ್ನು ನೀಡಲಾಗಿದ್ದು ಇದರಿಂದ ಅವರ ಬದುಕಿಗೊಂದು ಆಸರೆಯಾಗಲಿ ಅವರು ಸಹ ತಮ್ಮ ದೈನಂದಿನ ಚಟುವಟಿಕೆಗಳಿಗೆ ಇವು ಸಹಕಾರಿಯಾಗಲಿ ಎಂದು ನೀಡಲಾಗಿದ್ದು ಈ ಮೂಲಕ ಅವರು ಸ್ವವಲಂಬಿಯಾಗಿ ಬದುಕನ್ನು ಕಟ್ಟಿಕೊಳ್ಳಬೇಕೆಂಬ ಉದ್ದೇಶವಿದೆ ಎಂದು ಶಾಸಕ ಸಿ.ಬಿ.ಸುರೇಶ್‌ಬಾಬು ತಿಳಿಸಿದರು.

ಪಟ್ಟಣದ ತೀನಂಶ್ರೀ ಭವನದ ಬಳಿ ನಗರೋತ್ಥಾನದ ಯೋಜನೆಯಡಿ ಪುರಸಭೆಯುವತಿಯಿಂದ ವಿಶೇಷ ಚೇತನರಿಗೆ ತ್ರಿಚಕ್ರ ವಾಹನಗಳನ್ನು ವಿತರಣೆ ಮಾಡಿ ಮಾತನಾಡಿದ ಅವರು ಒಟ್ಟು 40ಲಕ್ಷದ 35ಸಾವಿರ ವೆಚ್ಚದಲ್ಲಿ ಒಟ್ಟು 36ಜನರಿಗೆ ಈ ವಾಹನಗಳನ್ನು ವಿತರಿಸಲಾಗುತ್ತಿದ್ದು ಇದರಿಂದ ಅವರು ಸಮಾಜದಲ್ಲಿ ಒಡಾಡುವಂತಹ ಯಾವುದಾದರು ಸಣ್ಣಪುಟ್ಟ ವ್ಯಾಪಾರಗಳನ್ನು ಮಾಡುವಂತಹ ಕೆಲಸವನ್ನು ಮಾಡುವ ಮೂಲಕ ತಮ್ಮ ಬದುಕನ್ನು ಕಟ್ಟಿಕೊಳ್ಳಬೇಕೆಂದು ಇವುಗಳನ್ನು ವಿತರಣೆ ಮಾಡುತ್ತಿದ್ದು ಇದನ್ನು ಸದ್ಬಳಕೆ ಮಾಡಿಕೊಳ್ಳಿ ಎಂದರು.



ಈ ಸಂದರ್ಭದಲ್ಲಿ ಪುರಸಭೆಯ ಮುಖ್ಯಾಧಿಕಾರಿ ಮಂಜಮ್ಮ ಮಾಹಿತಿ ನೀಡಿ ಮುಖ್ಯಮಂತ್ರಿ ಅಮೃತ್ ನಗರೋತ್ಥಾನ 4ನೇಹಂತದ ಯೋಜನೆಯಡಿ ಪುರಸಭಾ ವ್ಯಾಪ್ತಿಯ 36ಜನ ವಿಕಲಚೇತನರಿಗೆ 40ಲಕ್ಷ 35ಸಾವಿರ ವೆಚ್ಚದಲ್ಲಿ ಪೆಟ್ರೋಲ್‌ಚಾಲಿತ ತ್ರಿಚಕ್ರ ಮೋಟಾರ್ ವಾಹನಗಳನ್ನು ವಿತರಿಸಲಾಗಿದೆ ಎಂದರು.

ಈ ಸಂದರ್ಭದಲ್ಲಿ ಮಾಜಿ ಪುರಸಭಾಧ್ಯಕ್ಷರುಗಳಾದ ಎಂ.ಎನ್.ಸುರೇಶ್, ಸಿ.ಬಸವರಾಜು, ಮಾಜಿ ಸದಸ್ಯರುಗಳಾದ ರಾಜಶೇಖರ್,ಉಮಾಪರಮೇಶ್, ಬೆಸ್ಕಾಂ ಎಇಇ ಗವಿರಂಗಯ್ಯ, ಬಿಇಒ ಕಾಂತರಾಜು, ಮೇಲ್ವಿಚಾರಕ ರಮೇಶ್, ಮುಖಂಡರುಗಳಾದ ದೊರೆಮುದ್ದಯ್ಯ, ಹರ್ಷ ತಿಮ್ಮನಹಳ್ಳಿ ಹಾಗೂ ಇತರರು ಇದ್ದರು.

## ಜುಲೈ 17 ರಿಂದ 19ರವರೆಗೆ ಇಲಾಖಾ ಪರೀಕ್ಷೆ: ನಿಷೇಧಾಜ್ಞೆ ಜಾರಿ

ತುಮಕೂರು: ಕರ್ನಾಟಕ ಲೋಕಸೇವಾ ಆಯೋಗವು 2026ನೇ ಸಾಲಿನ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆಯನ್ನು ಜಿಲ್ಲಾ ಕೇಂದ್ರಗಳಲ್ಲಿ ಜುಲೈ 17 ರಿಂದ 19ರವರೆಗೆ ನಡೆಸಲಿದ್ದು, ಪರೀಕ್ಷೆಯನ್ನು ಯಾವುದೇ ಲೋಪದೋಷ ಹಾಗೂ ಅಹಿತಕರ ಘಟನೆ ಸಂಭವಿಸದಂತೆ ನಡೆಸಲು ಪರೀಕ್ಷಾ ಕೇಂದ್ರದ ಸುತ್ತಮುತ್ತ 200 ಮೀಟರ್ ವ್ಯಾಪ್ತಿಯೊಳಗಿನ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಶುಭ ಕಲ್ಯಾಣ್ ಅವರು ಆದೇಶ ಹೊರಡಿಸಿದ್ದಾರೆ.

ನಿಷೇಧಾಜ್ಞೆಯು ಜುಲೈ 17, 18 ಹಾಗೂ 19ರಂದು ಬೆಳಿಗ್ಗೆ 9.30 ರಿಂದ ಸಂಜೆ 4.30 ಗಂಟೆಯವರೆಗೆ ಜಾರಿಯಲ್ಲಿರುತ್ತದೆ. ಈ ನಿಷೇಧಾಜ್ಞೆಯನ್ವಯ ಪರೀಕ್ಷೆ ನಡೆಯುವ ದಿನಾಂಕದಂದು ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಇರುವ ಜೆರಾಕ್ಸ್ ಮತ್ತು ಬೆರಳಚ್ಚು ಕೇಂದ್ರಗಳನ್ನು ಮುಚ್ಚತಕ್ಕದ್ದು. ನಿಷೇಧಾಜ್ಞೆ ಜಾರಿಯಲ್ಲಿರುವ ಅವಧಿಯಲ್ಲಿ ಅನಧಿಕೃತ ವ್ಯಕ್ತಿಗಳು ಯಾರೂ ನಿರ್ಬಂಧಿತ ಪ್ರದೇಶದೊಳಗೆ ಪ್ರವೇಶಿಸುವಂತಿಲ್ಲ ಹಾಗೂ ನಿಷೇಧಾಜ್ಞೆಯನ್ನು ಉಲ್ಲಂಘಿಸಿದವರನ್ನು ಬಂಧಿಸಿ ಅವರ ವಿರುದ್ಧ ಕಾನೂನು ಕ್ರಮ ಜರುಗಿಸಲು ಜಿಲ್ಲಾ ಪೊಲೀಸ್ ಇಲಾಖೆಗೆ ಆದೇಶಿಸಲಾಗಿದೆ.

ಜಿಲ್ಲೆಯಲ್ಲಿ ಪ್ರಶ್ನೆ ಪತ್ರಿಕೆಗಳ ಸೋರಿಕೆ ಮತ್ತು ಪರೀಕ್ಷಾ ಅಕ್ರಮಗಳಿಗೆ ಉತ್ತೇಜನ ನೀಡುವಂತಹ ವ್ಯಕ್ತಿಗಳು ಕಂಡು ಬಂದಲ್ಲಿ ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಸೂಚಿಸಿದ್ದಾರೆ.

## ರಾಷ್ಟ್ರೀಯ ಮಟ್ಟದ ನಾಯಕತ್ವ ಪ್ರಶಸ್ತಿಗೆ ಭಾಜನರಾದ ಸಿದ್ಧಾರ್ಥ ವೈದ್ಯಕೀಯ ಕಾಲೇಜಿನ ಡಾ.ಜಿ.ಎನ್.ಪ್ರಭಾಕರ್

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ನಗರದ ಶ್ರೀ ಸಿದ್ಧಾರ್ಥ ವೈದ್ಯಕೀಯ ಕಾಲೇಜಿನ ಉಪ ಪ್ರಾಂಶುಪಾಲರು ಮತ್ತು ಸಾಮಾನ್ಯ ಶಸ್ತ್ರಚಿಕಿತ್ಸಾ ವಿಭಾಗದ ಪ್ರಾಧ್ಯಾಪಕರು ಮತ್ತು ಮುಖ್ಯಸ್ಥರಾಗಿರುವ ಡಾ.ಜಿ.ಎನ್.ಪ್ರಭಾಕರ ಅವರಿಗೆ ಭಾರತೀಯ ವೈದ್ಯಕೀಯ ಸಂಘ (ಐಎಂಎ) ಕೊಡಮಾಡುವ ಪ್ರತಿಷ್ಠಿತ ನಾಯಕತ್ವ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ರಾಷ್ಟ್ರೀಯ ವೈದ್ಯರ ದಿನದ ಅಂಗವಾಗಿ ಇದೇ ಜುಲೈ 18 ರಂದು ನವದೆಹಲಿಯಲ್ಲಿ ನಡೆಯುವ ರಾಷ್ಟ್ರೀಯ ವೈದ್ಯರ ದಿನಾಚರಣೆಯ ಸಮಾರಂಭದಲ್ಲಿ ಪ್ರಶಸ್ತಿಯನ್ನು ಪ್ರದಾನ ಮಾಡಲಾಗುತ್ತದೆ. ತುಮಕೂರಿನ ಶ್ರೀ ಸಿದ್ಧಾರ್ಥ ಉನ್ನತ ಶಿಕ್ಷಣ ಅಕಾಡೆಮಿಯಲ್ಲಿ ಬರುವ ಶ್ರೀ ಸಿದ್ಧಾರ್ಥ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯಲ್ಲಿ ವೈದ್ಯಕೀಯ ಸೇವೆಗಾಗಿ ಈ ಪ್ರಶಸ್ತಿ ಸಂದಿದೆ.



ಡಾ.ಜಿ.ಎನ್.ಪ್ರಭಾಕರ ಅವರು ಜನರಲ್ ಸರ್ಜರಿಯಲ್ಲಿ ವೈದ್ಯಕೀಯ ಪದವಿ ಮತ್ತು ಸ್ನಾತಕೋತ್ತರ (ಎಂ.ಎಸ್) ಪದವಿ ಪಡೆದಿದ್ದಾರೆ. ಶ್ರೀ ಸಿದ್ಧಾರ್ಥ ವೈದ್ಯಕೀಯ ಕಾಲೇಜಿನಲ್ಲಿ 1995ರಿಂದ ಸಾಮಾನ್ಯ ಶಸ್ತ್ರಚಿಕಿತ್ಸೆ ವಿಭಾಗದಲ್ಲಿ ಕಾರ್ಯನಿರ್ವಹಿಸಿ ಪ್ರಸ್ತುತ ಪ್ರಾಧ್ಯಾಪಕರು ಮತ್ತು ಮುಖ್ಯಸ್ಥರು ಹಾಗೂ ಉಪ ಪ್ರಾಂಶುಪಾಲರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಡಾ. ಪ್ರಭಾಕರ ಜಿ.ಎನ್. ಅವರು ನಾಯಕತ್ವದಡಿಯಲ್ಲಿ ರೋಗಿಗಳ ಆರೈಕೆಗೆ ಬದ್ಧತೆ, ವೈದ್ಯಕೀಯ ಶಿಕ್ಷಣದಲ್ಲಿನ ಶ್ರೇಷ್ಠತೆ ಮತ್ತು ಆರೋಗ್ಯ ವೃತ್ತಿಪರರಾಗಿ ವೈದ್ಯಕೀಯ ಕ್ಷೇತ್ರಕ್ಕೆ ಅಮೂಲ್ಯವಾದ ಕೊಡುಗೆಗಳನ್ನು ನೀಡುತ್ತಿದ್ದಾರೆ. ಪ್ರಶಸ್ತಿಗೆ ಆಯ್ಕೆಯಾಗಿರುವ ಡಾ. ಪ್ರಭಾಕರ ಜಿ.ಎನ್. ಅವರು ಮಾತನಾಡಿ, ಕಾಲೇಜಿನಲ್ಲಿ ಉತ್ತಮ ಗುಣಮಟ್ಟದ ಬೋಧನೆ–ಕಲಿಕಾ ವಿಧಾನಗಳನ್ನು ಅಳವಡಿಸಿಕೊಳ್ಳಲು ಮತ್ತು ಇತ್ತೀಚಿನ ವೈದ್ಯಕೀಯ ತಂತ್ರಜ್ಞಾನವನ್ನು ಕುರಿತ ತರಬೇತಿ ನೀಡಲು ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಕೌಶಲ್ಯ ಪ್ರಯೋಗಾಲಯದಲ್ಲಿ ಹೆಚ್ಚಿನ ಕೆಲಸ, ವೈದ್ಯಕೀಯ ಸೇವೆಗಳಲ್ಲಿ ಉತ್ತಮ ಗುಣಮಟ್ಟದ ನೈತಿಕತೆಯನ್ನು ಕಾಪಾಡಿಕೊಳ್ಳಲು ಬದ್ಧರಾಗಿದ್ದು, ಅಗತ್ಯ ಸೇವೆಗಳನ್ನು ನೀಡುತ್ತಿದ್ದೇನೆ.

ಶ್ರೀ ಸಿದ್ಧಾರ್ಥ ವೈದ್ಯಕೀಯ ಕಾಲೇಜಿನಲ್ಲಿ ಕಳೆದ 31 ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಅವರು, ರಾಜ್ಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಹಲವಾರು ವಿಚಾರ ಸಂಕಿರಣಗಳಲ್ಲಿ ಭಾಗವಹಿಸಿ, ಪ್ರಬಂಧಗಳನ್ನು ಮಂಡಿಸಿದ್ದಾರೆ.

ವೈದ್ಯಕೀಯ ಕ್ಷೇತ್ರದ ಗಣನೀಯ ಸೇವೆಗಾಗಿ ಭಾರತದ ವೈದ್ಯಕೀಯ ಸಂಘದ ಕರ್ನಾಟಕ ರಾಜ್ಯ ಶಾಖೆಯಿಂದ 2023ರಲ್ಲಿ ವೈದ್ಯರ ದಿನಾಚರಣೆ ಪ್ರಶಸ್ತಿ, 2019 ರಲ್ಲಿ ಪಿ.ಸಿ.ಶುಕ್ಲಾ ಪ್ರಶಸ್ತಿ,2018ರಲ್ಲಿ ಡಾ.ಡಿ.ಎಸ್.ಮುನಗೇಕರ್ ರೀಸರ್ಚ್ ಪ್ರಶಸ್ತಿ ಸೇರಿದಂತೆ ಹಲವು ಗೌರವ ಸನ್ಮಾನಗಳು ಡಾ. ಪ್ರಭಾಕರ ಜಿ.ಎನ್ ಅವರಿಗೆ ಸಂದಿವೆ.

ಅಭಿನಂದನೆ: ಭವಿಷ್ಯದ ಆರೋಗ್ಯ ವೃತ್ತಿಪರರಿಗೆ ಸ್ಫೂರ್ತಿ ನೀಡುವ ಮತ್ತು ಸಮಾಜಕ್ಕೆ ವಿಶಿಷ್ಟ ಸೇವೆ ಸಲ್ಲಿಸುವ ಡಾ.ಪ್ರಭಾಕರ ಅವರಿಗೆ ನಿರಂತರ ಯಶಸ್ಸನ್ನು ಬಯಸುವುದಾಗಿ ಹೇಳಿರುವ ಸಾಹೇ ವಿವಿ ಕುಲಾಧಿಪತಿಗಳಾದ ಡಾ.ಜಿ.ಪರಮೇಶ್ವರ ಅವರು, ಗಮನಾರ್ಹ ಸಾಧನೆಗಾಗಿ ಅಭಿನಂದಿಸಿದ್ದಾರೆ. ಉಪಕುಲಪತಿ ಡಾ.ಲಿಂಗೇಗೌಡ, ಕುಲಸಚಿವ ಡಾ.ಅಶೋಕ್ ಮೆಹ್ತಾ, ಪ್ರಾಂಶುಪಾಲರಾದ ಡಾ.ಎಂ.ಬಿ.ಸಾಣಿಕೊಪ್ಪ ಸೇರಿದಂತೆ ಶ್ರೀ ಸಿದ್ಧಾರ್ಥ ಶಿಕ್ಷಣ ಸಂಸ್ಥೆಗಳ ಅಂಗ ಸಂಸ್ಥೆಗಳ ಪ್ರಾಂಶುಪಾಲರು ಮತ್ತು ಪ್ರಾಧ್ಯಾಪಕರು ಡಾ.ಪ್ರಭಾಕರ ಅವರನ್ನು ಅಭಿನಂದಿಸಿದ್ದಾರೆ.

ಸಂಶೋಧನೆಯನ್ನು ಮುಂದುವರಿಸುವ ಆಸಕ್ತಿಯನ್ನು ಉತ್ತೇಜಿಸಿದ ಮತ್ತು ಎಲ್ಲಾ ರೀತಿಯಲ್ಲಿ ಬೆಂಬಲ ಸೂಚಿಸಿದ ಆಡಳಿತ ಮಂಡಳಿ, ಪ್ರಾಂಶುಪಾಲರು, ಪಿಎಚ್‌ಡಿ ಮಾರ್ಗದರ್ಶಕರು, ಪ್ರಾಧ್ಯಾಪಕರು, ವಿಭಾಗದ ಸಹೋದ್ಯೋಗಿಗಳು, ಬೋಧಕ ಮತ್ತು ಬೋಧಕೇತರ ವಿಭಾಗ ಸೇರಿದಂತೆ ಎಲ್ಲಾ ವಿಭಾಗಗಳಿಗೆ ಧನ್ಯವಾದಗಳನ್ನು ತಿಳಿಸಿದರು.

## ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದವರಿಗೆ ರಾಜ್ಯ ಪ್ರಶಸ್ತಿ : ನಾಮ ನಿರ್ದೇಶನ ಆಹ್ವಾನ

ತುಮಕೂರು: ಕರ್ನಾಟಕ ಸರ್ಕಾರವು ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕನಿಷ್ಠ 5 ವರ್ಷಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿರುವ ವ್ಯಕ್ತಿಗಳಿಗೆ ತಲಾ 25,000 ರೂ. ಹಾಗೂ ಸಂಸ್ಥೆಗಳಿಗೆ ತಲಾ 1,00,000 ರೂ.ಗಳ ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರ ನೀಡಲು ಅರ್ಹರಿಂದ ನಾಮ ನಿರ್ದೇಶನಗಳನ್ನು ಆಹ್ವಾನಿಸಲಾಗಿದೆ.

ಆಯ್ಕೆಯಾದವರಿಗೆ ಮಕ್ಕಳ ದಿನಾಚರಣೆಯಂದು ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಗುವುದು. ಪ್ರಶಸ್ತಿಗಾಗಿ ನಿಗದಿತ ಅರ್ಜಿ ನಮೂನೆಯನ್ನು ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಬಾಲಭವನ ಆವರಣ, ಎಂ.ಜಿ.ರಸ್ತೆ, ತುಮಕೂರು ಇವರ ಕಚೇರಿಯಿಂದ ಪಡೆದು ಕನ್ನಡ ಭಾಷೆಯಲ್ಲಿ ಭರ್ತಿ ಮಾಡಿ ದ್ವಿಪ್ರತಿಯಲ್ಲಿ ಆಗಸ್ಟ್ 20ರೊಳಗಾಗಿ ಸಲ್ಲಿಸತಕ್ಕದ್ದು ಎಂದು ಪ್ರಕಟಣೆ ತಿಳಿಸಿದೆ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಸರ್ಕಾರಿ ಕೆರೆಯ ಜಾಲಿ ಮರಗಳ ಮಾರಣ ಹೋಮ: ಇದ್ದಿಲುಗಾಗಿ ಬುಡ ಸಮೇತ ಕಡಿದು ಮಾರಾಟ

ಪಾವಗಡ:ತಾಲ್ಲೂಕಿನ ಜೋಡಿ ಅಚ್ಚಮ್ಮನಹಳ್ಳಿ ಗ್ರಾಮದ ಸರ್ಕಾರಿ ಕೆರೆಯಲ್ಲಿನ ನೂರಾರು ಜಾಲಿ ಮರಗಳನ್ನು ಖಾಸಗಿ ವ್ಯಾಪಾರಿಯೊಬ್ಬ ಇದ್ದಿಲು ತಯಾರಿಗೆ ಬುಡಸಮೇತ ಕಡಿದು ಹಾಕಿರುವ ಘಟನೆ ಬೆಳಕಿಗೆ ಬಂದಿದೆ. ಇದರಿಂದ ಬೇಸಿಗೆಯಲ್ಲಿ ಸಾವಿರಾರು ಜಾನುವಾರುಗಳ ಮೇವಿಗೆ ಕೊರತೆ ಉಂಟಾಗುವ ಆತಂಕ ಸ್ಥಳೀಯರಲ್ಲಿ ಎದುರಾಗಿದೆ. ವೈ.ಎನ್. ಹೊಸಕೋಟೆ ಹೋಬಳಿಯ ಜೋಡಿ ಅಚ್ಚಮ್ಮನಹಳ್ಳಿ ದೊಡ್ಡ ಕೆರೆ ಸರ್ಕಾರಿ ಸ್ವತ್ತಾಗಿದೆ. ಕೆರೆಯಲ್ಲಿರುವ ಮರ, ಗಿಡ, ಸಸ್ಯವರ್ಗ ಮತ್ತು ಮಣ್ಣು ಸಹ ಸರ್ಕಾರದ್ದಾಗಿದೆ. ಆದರೂ ಕೆರೆ ಅಭಿವೃದ್ಧಿ ಸಮಿತಿ ಎಂದು ಹೇಳಿಕೊಳ್ಳುತ್ತಿರುವ ಗ್ರಾಮದ ಕೆಲವರು ಮರಗಳನ್ನು ಮಹಾರಾಷ್ಟ್ರ ಮೂಲದ ಖಾಸಗಿ ವ್ಯಾಪಾರಿಗೆ ಮಾರಾಟ ಮಾಡಿದ್ದಾರೆ ಎಂಬ ಆರೋಪ ಕೇಳಿಬಂದಿದೆ.

ಮರಗಳನ್ನು ಖರೀದಿಸಿರುವ ವ್ಯಾಪಾರಿ ರಮೇಶ್, ಕೆರೆಯಲ್ಲಿನ ಮರಗಳನ್ನು ಕಡಿದು ಸ್ಥಳದಲ್ಲೇ ಇದ್ದಿಲು ತಯಾರಿಸಿ ಲಾಭ ಗಳಿಸುತ್ತಿದ್ದಾರೆ. ಈ ಬಗ್ಗೆ ಪ್ರಶ್ನಿಸಿದಾಗ ಜೋಡಿ ಅಚ್ಚಮ್ಮನಹಳ್ಳಿ ಗ್ರಾಮದ ಲಿಂಗಪ್ಪ ಎಂಬುವವರು ಅನುಮತಿ ನೀಡಿದ್ದಾರೆ.



ಅವರಿಗೆ 80 ಸಾವಿರ ರೂ. ನೀಡಿದ್ದೇವೆ ಎಂದು ವ್ಯಾಪಾರಿ ತಿಳಿಸಿದ್ದಾರೆ.

ಈ ವಿಚಾರವಾಗಿ ಪ್ರತಿಕ್ರಿಸಿದ ಕೆರೆ ಅಭಿವೃದ್ಧಿ ಸಮಿತಿಯ ಅಧ್ಯಕ್ಷರೆಂದು ಹೇಳಿಕೊಳ್ಳುವ ವ್ಯಕ್ತಿಯೊಬ್ಬರು ದರ್ಪದಿಂದ ಮಾತನಾಡಿ, ನಿಮಗೆ ಬೇಕಾದ ಕಡೆ ದೂರು ನೀಡಿಕೊಳ್ಳಿ. ಇದು ನಮ್ಮ ಸಮಿತಿಗೆ ಸೇರಿದೆ ಎಂದು ಹೇಳಿದ್ದಾರೆ.

ಘಟನೆ ಸ್ಥಳಕ್ಕೆ ಭೇಟಿ ನೀಡಿದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮುದ್ದಣ್ಣ, ಕೆರೆಯು ನಮ್ಮ ವ್ಯಾಪ್ತಿಗೆ ಬರುವುದಿಲ್ಲ. ಇದು ಜಿಲ್ಲಾ ಪಂಚಾಯಿತಿ ವ್ಯಾಪ್ತಿ ಎಂದು ತಿಳಿಸಿದರು. ನಂತರ ಜಿಲ್ಲಾ ಪಂಚಾಯಿತಿ ಎಂಜಿನಿಯರ್ ಬಸವಲಿಂಗ ಅವರನ್ನು ಸಂಪರ್ಕಿಸಿದಾಗ ಜೋಡಿ ಅಚ್ಚಮ್ಮನಹಳ್ಳಿ ಕೆರೆ ನಮ್ಮ ವ್ಯಾಪ್ತಿಗೆ ಬರುತ್ತದೆ. ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ ಮುಂದಿನ ಕ್ರಮ ಕೈಗೊಳ್ಳುತ್ತೇವೆ ಎಂದು ಭರವಸೆ ನೀಡಿದರು.

ಈ ಕುರಿತು ಪ್ರತಿಕ್ರಿಸಿದ ಜಿಲ್ಲಾ ಪಂಚಾಯಿತಿ ಎ.ಇ. ಬಸವಲಿಂಗಪ್ಪ, ಜೋಡಿ ಅಚ್ಚಮ್ಮನಹಳ್ಳಿ ಕೆರೆಯು ನಮ್ಮ ಇಲಾಖೆಯಡಿ ಬರುತ್ತದೆ. ಕೆರೆ ಅಭಿವೃದ್ಧಿ ಸಂಘ ಇದೆಯೋ ಇಲ್ಲವೋ, ಇದ್ದರೆ ಅದರ ಇತಿಮಿತಿ ಏನು ಎಂಬುದನ್ನು ಪರಿಶೀಲಿಸಿ, ಯಾವ ಆಧಾರದ ಮೇಲೆ ಅನುಮತಿ ನೀಡಿದ್ದಾರೆ ಎಂದು ತನಿಖೆ ಮಾಡಿ ಕ್ರಮ ಜರುಗಿಸುತ್ತೇವೆ ಎಂದು ತಿಳಿಸಿದರು.

ಜೋಡಿ ಅಚ್ಚಮ್ಮನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸುಮಾರು 5 ರಿಂದ 6 ಸಾವಿರ ಕುರಿ, ಮೇಕೆಗಳಿವೆ. ಬೇಸಿಗೆ ಕಾಲದಲ್ಲಿ ಬಹುತೇಕ ಜಾನುವಾರುಗಳು ಈ ಕೆರೆಯ ಜಾಲಿ ಸೊಪ್ಪು ಮತ್ತು ಮೇವನ್ನು ಅವಲಂಬಿಸಿವೆ. ಮರಗಳನ್ನು ಕಡಿದಿರುವುದರಿಂದ ಬೇಸಿಗೆಯಲ್ಲಿ ಮೇವಿಲ್ಲದೆ ವಲಸೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಕುರಿಗಾಹಿಗಳು ಆತಂಕ ವ್ಯಕ್ತಪಡಿಸಿದ್ದಾರೆ. ನಾವು ಪ್ರತಿ ವರ್ಷ ಒಂದು ಕುರಿ ಬ್ಯಾಚ್‌ಗೆ 10 ರಿಂದ 15 ಸಾವಿರ ರೂ.ಗಳನ್ನು ಕೆರೆ ಅಭಿವೃದ್ಧಿ ಸಮಿತಿಗೆ ನೀಡುತ್ತಿದ್ದೇವೆ. ಹಣ ಪಡೆದ ಮೇಲೂ ಈಗ ಸೊಪ್ಪು ಇಲ್ಲದ ಸ್ಥಿತಿ ಬಂದಿದೆ. ನಾವು ಎಲ್ಲಿಗೆ ಹೋಗಬೇಕು ಎಂದು ಮೆಗಲಪಾಳ್ಯ ಗ್ರಾಮದ ಕುರಿಗಾಹಿ ಶಿವಪ್ಪ ಅಳಲು ತೋಡಿಕೊಂಡರು.

ಸರ್ಕಾರಿ ಸ್ವತ್ತನ್ನು ಖಾಸಗಿಯವರಿಗೆ ಮಾರಿ, ನೈಸರ್ಗಿಕ ಸಂಪನ್ಮೂಲ ನಾಶ ಮಾಡುತ್ತಿರುವ ಈ ಘಟನೆಗೆ ಸಂಬಂಧಪಟ್ಟ ಇಲಾಖೆಗಳು ಕೂಡಲೇ ಕ್ರಮ ಕೈಗೊಂಡು ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಜರುಗಿಸಬೇಕೆಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

# ಪ್ರತಿ ತಾಲ್ಲೂಕಿನಲ್ಲಿಯೂ ಭವನ ನಿರ್ಮಾಣಕ್ಕೆ ಸಮಿತಿ ಸದಸ್ಯರ ಒಕ್ಕೊರಲ ಮನವಿ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಜಿಲ್ಲೆಯ ಪ್ರತಿ ತಾಲ್ಲೂಕಿನಲ್ಲಿಯೂ ಸಂವಿಧಾನ ಶಿಲ್ಪಿ ಡಾ: ಬಿ.ಆರ್. ಅಂಬೇಡ್ಕರ್ ಹಾಗೂ ಹಸಿರುಕ್ರಾಂತಿ ಹರಿಕಾರ ಡಾ: ಬಾಬು ಜಗಜೀವನ ರಾಂ ಭವನ ನಿರ್ಮಿಸಲು 10 ಗುಂಟೆ ಜಾಗ ಮಂಜೂರು ಮಾಡಬೇಕೆಂದು ಜಿಲ್ಲಾ ಜಾಗೃತಿ ಉಸ್ತುವಾರಿ ಸಮಿತಿ ಸದಸ್ಯರು ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರು.

ಅನುಸೂಚಿತ ಜಾತಿ ಮತ್ತು ಬುಡಕಟ್ಟಿಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ನಡೆದ ಜಿಲ್ಲಾ ಮಟ್ಟದ ಜಿಲ್ಲಾ ಜಾಗೃತಿ ಉಸ್ತುವಾರಿ ಸಮಿತಿ ಸಭೆಯಲ್ಲಿ ಈ ಮನವಿ ಮಾಡಲಾಯಿತು.

ಸಭೆಯ ಅಧ್ಯಕ್ಷತೆವಹಿಸಿದ್ದ ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಮಾತನಾಡುತ್ತಾ, ಆಷಾಡ ಮಾಸ ಪ್ರಯುಕ್ತ ಜಿಲ್ಲೆಯಲ್ಲಿ ಜರುಗುವ ವಿಶೇಷ ಜಾತ್ರೆ ಸಂದರ್ಭಗಳಲ್ಲಿ ಕೋಣಗಳ ಬಲಿ



ಕೊಡುವುದನ್ನು ನಿರ್ಬಂಧಿಸಲು ಕ್ರಮಕೈಗೊಳ್ಳಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪರಿಶಿಷ್ಟ ಜಾತಿ ಮತ್ತು ಪಂಗಡದ ಜನಾಂಗದವರು ದೇವಾಲಯ ಪ್ರವೇಶಕ್ಕೆ ಸಂಬಂಧಿಸಿದಂತೆ ಯಾವುದೇ ದೂರು ಬರದಂತೆ ಕ್ರಮವಹಿಸಬೇಕೆಂದು ನಿರ್ದೇಶನ ನೀಡಿದರು. ಜಿಲ್ಲೆಯ ಉಪವಿಭಾಗ ಮಟ್ಟದಲ್ಲಿ ಕಡ್ಡಾಯವಾಗಿ ಜಾಗೃತಿ ಉಸ್ತುವಾರಿ ಸಮಿತಿ ಸಭೆಗಳನ್ನು ನಡೆಸಬೇಕು ಎಂದು ಉಪವಿಭಾಗಾಧಿಕಾರಿಗಳಿಗೆ ಹಾಗೂ ತಾಲ್ಲೂಕು ಮಟ್ಟದಲ್ಲಿ ಪರಿಶಿಷ್ಟ ಜಾತಿ ಹಾಗೂ ವರ್ಗದ ಕುಂದುಕೊರತೆಗಳ ಸಭೆ ನಡೆಸಿ ತಮ್ಮ ಹಂತದಲ್ಲಿಯೇ ಪರಿಶೀಲಿಸಿ ಸಮಸ್ಯೆಯನ್ನು ಬಗೆಹರಿಸಬೇಕೆಂದು ಎಲ್ಲಾ ತಹಶೀಲ್ದಾರರಿಗೆ ನಿರ್ದೇಶನ ನೀಡಿದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್ ಮಾತನಾಡಿ, ಸಮಿತಿಯ ಮುಂದಿರುವ ದೌರ್ಜನ್ಯ ಪ್ರಕರಣಗಳಿಗೆ ಸಂಬಂಧಿಸಿದಂತೆ ಸಾಕ್ಷಿದಾರರಿಗೆ ಯಾವುದೇ ಭಯ, ಆಮಿಷಗಳಿಗೆ ಒಳಗಾಗದಂತೆ ಸಾಕ್ಷಿ ನುಡಿಯಲು ಧೈರ್ಯ ತುಂಬಿ ಕ್ರಮವಹಿಸುವಂತೆ ಈಗಾಗಲೇ ಜಿಲ್ಲೆಯ ಎಲ್ಲಾ ಉಪಾಧೀಕ್ಷಕರುಗಳಿಗೆ ಸೂಚನೆ ನೀಡಲಾಗಿದೆ ಎಂದು ಸಭೆಗೆ ತಿಳಿಸಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ, ಪಾಲಿಕೆ ಆಯುಕ್ತೆ ಬಿ.ಶುಭ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ರಘುಚಂದ್ರ, ಉಪವಿಭಾಗಾಧಿಕಾರಿ ನಾಹಿದಾ ಜಂ ಜಂ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಯೋಗಾನಂದ, ತಹಶೀಲ್ದಾರ್ ರಾಜೇಶ್ವರಿ, ತೋಟಗಾರಿಕೆ ಇಲಾಖೆ ಜಂಟಿ ನಿರ್ದೇಶಕಿ ಶಾರದಮ್ಮ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕಿ ಸೋನಿಯಾ ವರ್ಣೇಕರ್, ವಿವಿಧ ತಾಲ್ಲೂಕಿನ ತಹಶೀಲ್ದಾರರು ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ಮೀನುಗಾರಿಕೆಯ ತರಬೇತಿ ಕೇಂದ್ರ, ಮೀನು ಮರಿ ಉತ್ಪಾದಕ ಘಟಕ ಆರಂಭ

ಸೂರ್ಯಪ್ರಗತಿನ್ಯೂಸ್.ಕಾಂ

ಚಿಕ್ಕನಾಯಕನಹಳ್ಳಿ:-ತಾಲ್ಲೂಕಿನಲ್ಲಿರುವ ಬೋರನ ಕಣಿವೆ ಜಲಾಶಯದಲ್ಲಿ ಮೀನುಗಾರಿಕೆಗೆ ಉತ್ತೇಜನ ನೀಡುವುದು ಸೇರಿದಂತೆ ಮೀನುಗಾರಿಕೆ ಕುರಿತ ತರಬೇತಿಕೇಂದ್ರ ಹಾಗೂ ಮೀನು ಮರಿ ಉತ್ಪಾದಕ ಘಟಕವನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಶಾಸಕ ಸಿ.ಬಿ.ಸುರೇಶ್‌ಬಾಬು ತಿಳಿಸಿದರು.

ಪಟ್ಟಣದ ಮೀನುಗಾರಿಕೆ ಇಲಾಖೆಗೆ ಬೇಟಿ ನೀಡಿ ಪ್ರಗತಿ ಪರೀಶಿಲನೆ ಸಭೆನಡೆಸಿ ಮಾತನಾಡಿದ ಅವರು ಮೀನುಗಾರಿಕೆಯು ಒಂದು ಲಾಭದಾಯಕ ಕೆಲಸವಾಗಿದ್ದು ಇದಕ್ಕೆ ತಾಲ್ಲೂಕಿನ ಜನರಿಗೆ ಹೆಚ್ಚು ಮಾಹಿತಿ ತಿಳಿಸಿ ಹಾಗೂ ತರಬೇತಿ ನೀಡುವಂತಹ ಕೆಲಸವಾಗಬೇಕು ಹಾಗೂ ಹುಳಿಯಾರಿನಲ್ಲಿ ಬೀದಿ ಬದಿಯಲ್ಲಿ ಮೀನು ಮಾರಾಟ ಮಾಡಲಾಗುತ್ತಿದೆ ಅದ್ದರಿಂದ ಮೀನು ಮಾರಾಟಕ್ಕೆ ಒಂದು ಕೇಂದ್ರವನ್ನು



ತೆರೆಯುವುದರ ಬಗ್ಗೆ ಕ್ರಮ ಕೈಗೊಳ್ಳಲು ತಿಳಿಸಿದ ಅವರು ಮೀನುಗಾರರಿಗೆ ದೋಣಿಗಳ ಮತ್ತು ಸರಿಯಾದ ರೀತಿಯಲ್ಲಿ ಎಚ್ಚರಿಕೆಗಳನ್ನು ನೀಡಿ ಮತ್ತು ಮೀನುಗಾರಿಕೆಯಿಂದ ಕೇವಲ 1.20ಲಕ್ಷ ಮನೆಗಳ ನಿರ್ಮಾಣಕ್ಕೆ ನೀಡುತ್ತಿರುವುದರಿಂದ ಇಷ್ಟು ಮೊತ್ತದಲ್ಲಿ ಮನೆನಿರ್ಮಿಸಿಕೊಳ್ಳಲು ಸಾದ್ಯವಿಲ್ಲ ಅದ್ದರಿಂದ ಗಣಬಾದಿತ ಪ್ರದೇಶಾಭಿವೃದ್ಧಿ ಯೋಜನೆಯಡಿ ಈ ಭಾಗದಲ್ಲಿ ಮೀನುಗಾರ ಕುಟುಂಬದ ಮನೆ ಇಲ್ಲದವರನ್ನು ಗುರುತಿಸಿ ಪಟ್ಟಿ ನೀಡಿ ಅವರಿಗೆ ಮನೆಗಳನ್ನು ಮಂಜೂರು ಮಾಡಿಸುವುದಾಗಿ ತಿಳಿಸಿದ ಅವರು ಬೋರನ ಕಣಿವೆ ಜಲಾಶಯದಲ್ಲಿ ಹೆಚ್ಚು ಮೀನುಗಾರಿಕೆ ನಡೆಸುವುದು, ಒಂದು ಪ್ರಯೋಗಾಲಯ ಸ್ಥಾಪನೆ, ತರಬೇತಿ ಕೇಂದ್ರ, ಮಾರಾಟ ಕೇಂದ್ರ, ಇನ್ನು ಹೆಚ್ಚು ಲಾಭ ತರುವಂತಹ ಮೀನುಗಳ ಸಾಕಣೆಗೆ ಉತ್ತೇಜ ನೀಡುವಂತೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಮೀನುಗಾರಿಕೆ ಇಲಾಖೆಯ ಉಪನಿರ್ದೇಶಕ ನಂಜುಂಡಪ್ಪ ಮಾಹಿತಿ ನೀಡಿ ತಾಲ್ಲೂಕಿನಲ್ಲಿ 2025-26ನೇ ಸಾಲಿನಲ್ಲಿ ಒಟ್ಟು 39 ಕೆರೆಗಳಿಗೆ ಒಟ್ಟು 35ಲಕ್ಷ ಮರಿಗಳನ್ನು ಬಿತ್ತನೆ ಮಾಡಿದ್ದು ಇದರೊಂದಿಗೆ 80ಜನರಿಗೆ ಪರವಾನಗಿಯನ್ನು ನೀಡಲಾಗಿದೆ. ರಾಜ್ಯವಲಯದಲ್ಲಿ ಒಂದು ಲಕ್ಷ ವೆಚ್ಚದಲ್ಲಿ 10ಜನರಿಗೆ ಸಲಕರಣೆಗಳ ಕಿಟ್ಟನ್ನು ವಿತರಿಸಿದ್ದು ಜಿಲ್ಲಾವಲಯದಲ್ಲಿ 2ಲಕ್ಷ ವೆಚ್ಚದಲ್ಲಿ 20ಜನರಿಗೆ ನೀಡಲಾಗಿದೆ ಇದರೊಂದಿಗೆ 60ಸಾವಿರ ವೆಚ್ಚದಲ್ಲಿ ಮತ್ಯವಾಹಿನಿಯನ್ನು ಇಬ್ಬರಿಗೆ ನೀಡಲಾಗಿದ್ದು ತಾಲ್ಲೂಕಿನಲ್ಲಿ 2860ಟನ್ ಮೀನುಗಳನ್ನು ಉತ್ಪಾದನೆ ಮಾಡಲಾಗಿದೆ ತಾಲ್ಲೂಕಿನಲ್ಲಿ ಒಟ್ಟು 28ಲಕ್ಷ ಮೀನಿನ ಮರಿಗಳ ಬೇಡಿಕೆ ಇದೆ ಎಂದು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಮೀನುಗಾರಿಕೆ ಇಲಾಖೆಯ ಸಹಾಯಕನಿರ್ದೇಶಕರಾದ ಮಂಜುಶ್ರೀ ಇದ್ದರು.

# 27ರಿಂದ ನಗರದಲ್ಲಿ ರಾಜ್ಯ ರ‍್ಯಾಂಕಿಂಗ್ ಬ್ಯಾಡ್ಮಿಂಟನ್ ಪಂದ್ಯಾವಳಿ

ಸೂರ್ಯಪ್ರಗತಿನ್ಯೂಸ್.ಕಾಂ

ರಾಜ್ಯ ಬ್ಯಾಡ್ಮಿಂಟನ್ ಅಸೋಸಿಯೇಷನ್ ಆಯೋಜನೆ ಯಟೂರ್ನಿ

ತುಮಕೂರು: ರಾಜ್ಯ ಬ್ಯಾಡ್ಮಿಂಟನ್ ಅಸೋಸಿಯೇಷನ್‌ನ 75 ವರ್ಷಾಚರಣೆ ಅಂಗವಾಗಿ ಈ ತಿಂಗಳ 27ರಿಂದ ಆರು ದಿನಗಳ ಕಾಲ ನಗರದಲ್ಲಿ ಯೋನೆಕ್ಸ್-ಸನ್ ರೈಸ್ ರಾಜ್ಯರ‍್ಯಾಂಕಿಂಗ್ ಬ್ಯಾಡ್ಮಿಂಟನ್ ಅಂಡರ್-11 ಮತ್ತು ಅಂಡರ್-13 ವಿಭಾಗಗಳ ಪಂದ್ಯಾವಳಿ ಏರ್ಪಾಟಾಗಿದೆ. ರಾಜ್ಯಾದ್ಯಂತ ಸುಮಾರು 600 ಆಟಗಾರರು ಪಂದ್ಯಾವಳಿಯಲ್ಲಿ ಭಾಗವಹಿಸಲಿದ್ದಾರೆ ಎಂದು ರಾಜ್ಯ ಬ್ಯಾಡ್ಮಿಂಟನ್ ಅಸೋಸಿಯೇಷನ್ ಅಧ್ಯಕ್ಷರೂ ಆದ ಮಾಜಿ ಸಚಿವ ಕುಮಾರ್ ಬಂಗಾರಪ್ಪ ಹೇಳಿದರು.

ಗುರುವಾರ ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದಅವರು, ಬ್ಯಾಡ್ಮಿಂಟನ್‌ನಲ್ಲಿ ರಾಜ್ಯ ಮುಂಚೂಣಿಯಲ್ಲಿದೆ. ರಾಜ್ಯದ ಪ್ರತಿಭಾವಂತ ಬ್ಯಾಡ್ಮಿಂಟನ್‌ಆಟಗಾರರುವಿಶ್ವ ಮಟ್ಟ ದಲ್ಲಿ ಹೆಸರು ಮಾಡಿದ್ದಾರೆ. ಮುಂಬರುವ ಒಲಂಪಿಕ್ ಗುರಿ ಇಟ್ಟುಕೊಂಡು ಪ್ರತಿಭಾನ್ವಿತ ಬ್ಯಾಡ್ಮಿಂಟನ್ ಆಟಗಾರರನ್ನುಗುರುತಿಸಲು, ಸಿದ್ಧಪಡಿಸಲು ಈ ಟೂರ್ನಮೆಂಟ್ ಉತ್ತಮ ವೇದಿಕೆ ಆಗಲಿದೆ.ಆರು ಅಂಕಣಗಳಲ್ಲಿ ಆರು ದಿನಗಳ ಕಾಲ ಪಂದ್ಯಾವಳಿ ನಡೆಯಲಿದೆ. ಆಗಸ್ಟ್ 1ರಂದು ಸಮಾರೋಪ ಸಮಾರಂಭ ಹಮ್ಮಿಕೊಳ್ಳಲಾಗಿದೆಎಂದು ಹೇಳಿದರು.

27ರಂದು ತುಮಕೂರು ಬ್ಯಾಡ್ಮಿಂಟನ್ ಅಕಾಡೆಮಿ



ಸ್ಥಳದಲ್ಲಿ ಬೆಳಿಗ್ಗೆ 10.45ಕ್ಕೆ ಸಿದ್ಧಗಂಗಾ ಮಠದ ಸಿದ್ಧಲಿಂಗ ಸ್ವಾಮೀಜಿಗಳ ದಿವ್ಯಸಾನಿಧ್ಯದ ಸಮಾರಂಭದಲ್ಲಿ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅವರು ಯೋನೆಕ್ಸ್-ಸನ್‌ರೈಸ್ ರಾಜ್ಯ ಬ್ಯಾಂಕಿಂಗ್ ಬ್ಯಾಡ್ಮಿಂಟನ್ ಅಂಡರ್-11 ಮತ್ತುಅಂಡರ್-13 ಪಂದ್ಯಾವಳಿ ಉದ್ಘಾಟಿಸುವರು. ಅಸೋಸಿಯೇಷನ್ ಅಧ್ಯಕ್ಷಕುಮಾರ್ ಬಂಗಾರಪ್ಪ ಅಧ್ಯಕ್ಷತೆ ವಹಿಸಿದರೆ ಕೇಂದ್ರ ಸಚಿವ ವಿ.ಸೋಮಣ್ಣ, ಜಿಲ್ಲೆಯಎಲ್ಲಾ ಶಾಸಕರು, ವಿಧಾನಪರಿಷತ್ ಸದಸ್ಯರು, ಹೆಸರಾಂತ ಕ್ರೀಡಾಪಟುಗಳು ಅತಿಥಿಗಳಾಗಿ ಭಾಗವಹಿಸುವರುಎಂದುಕುಮಾರ್ ಬಂಗಾರಪ್ಪ ತಿಳಿಸಿದರು.

ರಾಜ್ಯದವಿವಿಧ ಜಿಲ್ಲೆಗಳಿಂದ 500ಕ್ಕೂ ಹೆಚ್ಚು ಪ್ರತಿಭಾವಂತಕಿರಿಯ ಬ್ಯಾಡ್ಮಿಂಟನ್‌ಆಟಗಾರರು ಈ ಪಂದ್ಯಾವಳಿಯಲ್ಲಿ ಭಾಗವಹಿಸುವ ನಿರೀಕ್ಷೆಯಿದ್ದು, ಇದು ಅಂಡರ್-11 ಹಾಗೂ ಅಂಡರ್-13 ವಿಭಾಗಗಳ ರಾಜ್ಯದ ಪ್ರಮುಖ ಬ್ಯಾಡ್ಮಿಂಟನ್ ಪಂದ್ಯಾವಳಿಗಳಲ್ಲೊಂದಾಗಿದೆ ಎಂದಅವರು, ಕ್ರಿಕೆಟ್ ನಂತರ ಬ್ಯಾಡ್ಮಿಂಟ್ ಹೆಚ್ಚು ಜನಪ್ರಿಯಆಟವಾಗಿದೆ. ರಾಜ್ಯದಲ್ಲಿ ಪ್ರತಿನಿತ್ಯ ಸುಮಾರು ನಾಲ್ಕೂವರೆ ಸಾವಿರಜನ ಬ್ಯಾಡ್ಮಿಂಟನ್‌ಅಭ್ಯಾಸ ಮಾಡುತ್ತಿದ್ದಾರೆ. ಹೊಸ ಪ್ರತಿಭೆಗಳು ಹೊರಹೊಮ್ಮಬೇಕು, ರಾಷ್ಟ್ರೀಯ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಬೇಕು. ಇಂತಹ ಪ್ರತಿಭೆಗಳನ್ನು ಪ್ರೋತ್ಸಾಹಿಸಲು ಎಲ್ಲಾ ಜಿಲ್ಲೆಗಳಲ್ಲೂ ಸುಸಜ್ಜಿತಕ್ರೀಡಾಂಗಣ ನಿರ್ಮಾಣ ಮಾಡಲುಜಮೀನು ನೀಡಬೇಕುಎಂದು ಸರ್ಕಾರಕ್ಕೆಕೋರಿಕೆ ಸಲ್ಲಿಸಿದ್ದು ಮುಖ್ಯಮಂತ್ರಿಗಳು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದರು.

ರಾಜ್ಯ ಬ್ಯಾಂಡ್ಮಿಂಟನ್ ಅಸೋಸಿಯೇಷನ್ 1951ರಲ್ಲಿ ಮೈಸೂರು ಮಹಾರಾಜರ ನೇತೃತ್ವದಲ್ಲಿ ಆರಂಭವಾಯಿತು. ಇದರ 75ನೇ ವರ್ಷದ ಅಂಗವಾಗಿ ಎಲ್ಲಾ ಜಿಲ್ಲೆಗಳಲ್ಲೂ ಬ್ಯಾಡ್ಮಿಂಟನ್‌ಚಟುವಟಿಕೆ ಹಮ್ಮಿಕೊಂಡು ಸ್ಥಳೀಯ ಪ್ರತಿಭೆಗಳಿಗೆ ವೇದಿಕೆ ಕಲ್ಪಿಸುವಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದುಕುಮಾರ್ ಬಂಗಾರಪ್ಪ ಹೇಳಿದರು.

ಶಾಸಕ ಜಿ.ಬಿ. ಜ್ಯೋತಿಗಣೇಶ್ ಮಾತನಾಡಿ, ರಾಜ್ಯಮಟ್ಟದ ಪ್ರತಿಷ್ಠಿತ ಬ್ಯಾಡ್ಮಿಂಟನ್ ಟೂರ್ನಿತುಮಕೂರುನಗರದಲ್ಲಿನಡೆಯುತ್ತಿರುವುದು ಅಭಿಮಾನದ ವಿಚಾರ.ನಗರದಎಲ್ಲಾ ಕ್ರೀಡಾಪಟುಗಳು ಬೆಂಬಲ ನೀಡಿ ಸಹಕರಿಸಬೇಕು, ನಾಗರೀಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಪಂದ್ಯಾವಳಿ ವೀಕ್ಷಿಸಿ ಸಂಭ್ರಮಿಸಬೇಕುಎಂದು ಮನವಿ ಮಾಡಿದರು.

ತುಮಕೂರು ಬ್ಯಾಡ್ಮಿಂಟನ್ ಅಕಾಡೆಮಿ ಅಧ್ಯಕ್ಷ ಪಿ.ಪ್ರವೀಣ್, ರಾಜ್ಯ ಬ್ಯಾಡ್ಮಿಂಟನ್ ಅಸೋಸಿಯೇಷನ್ ಗೌರವ ಕಾರ್ಯದರ್ಶಿ ವಿ.ಮುರಳಿಧರ್, ಸದಸ್ಯರಾದ ಸುಧೀರ್, ಹರೀಶ್‌ಕುಮಾರ್, ಜಿಲ್ಲಾ ಆರ್ಯಈಡಿಗರ ಸಂಘದ ಗೌರವಾಧ್ಯಕ್ಷ ಅಜಯ್‌ಕುಮಾರ್, ಅಧ್ಯಕ್ಷ ಎಂ.ನಾಗರಾಜು, ಜಂಟಿ ಕಾರ್ಯದರ್ಶಿ ಊರುಕೆರೆ ಪುರುಷೋತ್ತಮ್, ಜಿಲ್ಲಾ ಅಮೆಚೂರ್ ಅಥ್ಲೆಟಿಕ್ ಅಸೋಸಿಯೇಷನ್ ಕಾರ್ಯದರ್ಶಿ ಎ.ಎನ್. ಪ್ರಭಾಕರ್ ಮೊದಲಾದವರು ಭಾಗವಹಿಸಿದ್ದರು.

## ಸಣ್ ಸುದ್ದಿ

### ಪಕ್ಷವನ್ನು ತಳಮಟ್ಟದಿಂದ ಸಂಘಟಿಸಬೇಕಾಗಿದೆ



ಮಧುಗಿರಿ.... ಪಕ್ಷವನ್ನು ತಳಮಟ್ಟದಿಂದ ಸಂಘಟಿಸಬೇಕಾಗಿದೆ ಎಂದು ಮಧುಗಿರಿ ಸಂಘಟನಾತ್ಮಕ ಜಿಲ್ಲೆಯ ಭಾಜಪ ಜಿಲ್ಲಾಧ್ಯಕ್ಷ ಹಾಗೂ ವಿಧಾನಪರಿಷತ್ ಸದಸ್ಯ ಚಿದಾನಂದ ಎಂ ಗೌಡ ತಿಳಿಸಿದ್ದಾರೆ ಪಟ್ಟಣದ ಜಿಲ್ಲಾ ಕಾರ್ಯಾಲಯದಲ್ಲಿ ನಡೆದ ಸಭೆಯಲ್ಲಿ ಮಾತನಾಡುತ್ತ ಪಕ್ಷದ ಸಿದ್ಧಾಂತಗಳು ಮತ್ತು ಜನಪರ ಯೋಜನೆಗಳನ್ನು ಜನಸಾಮಾನ್ಯರಿಗೆ ತಲುಪಿಸುವಲ್ಲಿ ಕಾರ್ಯಕರ್ತರು ಸಕ್ರಿಯವಾಗಿ ತೊಡಗಿಕೊಳ್ಳಬೇಕು ಮುಂದಿನ ದಿನಗಳಲ್ಲಿ ಸಾಲು ಸಾಲು ಚುನಾವಣೆಗಳು ಬರುತ್ತಿದ್ದು ಈಗಿನಿಂದಲೇ ಪಕ್ಷ ಸಂಘಟಿಸಲು ಸಿದ್ದರಾಗಿ ಎಂದು ಕರೆ ನೀಡಿದರು ಪಕ್ಷದ ಬಲವೇ ನಮ್ಮ ಕಾರ್ಯಕರ್ತರು ಮುಂಬರುವ ದಿನಗಳಲ್ಲಿ ಮದುಗಿರಿ ಜಿಲ್ಲಾ ವ್ಯಾಪ್ತಿಯಲ್ಲಿ ಸಂಘಟನೆಯನ್ನು ಮತ್ತಷ್ಟು ಬಲಿಷ್ಠ ಗೊಳಿಸಲು ನಾವೆಲ್ಲರೂ ಒಗ್ಗಟ್ಟಿನಿಂದ ಶ್ರಮಿಸಬೇಕಾಗಿದೆ ಎಂದು ತಿಳಿಸಿದರು ಸಭೆಯಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಾವಗಡ ರವಿ, ಜಿಲ್ಲಾ ಉಪಾಧ್ಯಕ್ಷರಾದ ರಾಮಕೃಷ್ಣ ಚಿಕ್ಕಣ್ಣ ಪವನ್ ಕುಮಾರ್ ರಾಜ್ಯ ಕಾರ್ಯಕಾರಣಿ ಸದಸ್ಯರಾದ ಬರಗೂರು ಶಿವಕುಮಾರ್ ಮಧುಗಿರಿ ಮಂಡಲ ಅಧ್ಯಕ್ಷ ಹನುಮಂತರೆಡ್ಡಿ ಕೊರಟಗೆರೆ ಮಂಡಲ ಅಧ್ಯಕ್ಷ ರುದ್ರೇಶ್ ಪಾವಗಡ ಮಂಡಲ ಅಧ್ಯಕ್ಷ ಅಶೋಕ್ ಜಿಲ್ಲಾ ಪದಾಧಿಕಾರಿಗಳು ಮಂಡಲ ಪದಾಧಿಕಾರಿಗಳು ಭಾಗವಹಿಸಿದ್ದರು.



ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯ ಅಧ್ಯಕ್ಷರಾದ ಡಾ.ಜಯಮಾಲ ಅವರು ವಿಧಾನಸೌಧದ ಕಾರ್ಯಾಲಯದಲ್ಲಿ ಮಾನ್ಯ ಉಪಮುಖ್ಯಮಂತ್ರಿಗಳಾದ ಡಾ. ಜಿ.ಪರಮೇಶ್ವರ ಅವರನ್ನು ಭೇಟಿ ಮಾಡಿ, ಶುಭ ಕೋರಿದರು. ಈ ವೇಳೆ 'ಶತಮಾನೋತ್ಸವ ಭವನ' ನಿರ್ಮಿಸಲು ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಗೆ ಸರ್ಕಾರದಿಂದ 5 ಎಕರೆ ಜಾಗ ನೀಡುವಂತೆ ಕೋರಿ ಮನವಿ ಪತ್ರ ಸಲ್ಲಿಸಿದರು.

### ನೇಕಾರ ಸಂಘದಿಂದ ಕೈಮಗ್ಗ ಉತ್ಪನ್ನ ಪ್ರದರ್ಶನ, ಮಾರಾಟ

ತುಮಕೂರು: ತಮ್ಮ ಸಮುದಾಯದ ಕುಲಕಸುಬುಕೈಮಗ್ಗದನೇಕಾರಿಕೆಯನ್ನು ಪ್ರೋತ್ಸಾಹಿಸಲು,ನೇಕಾರಸಂಘಗಳುನೇಯ್ದುಬಟ್ಟೆಗಳಿಗೆಮಾರುಕಟ್ಟೆಒದಗಿಸುವ ಸಲುವಾಗಿ ನೇಕಾರರ ಸಂಘ, ನೀಲಕಂಠೇಶ್ವರಸ್ವಾಮಿದೇವಸ್ಥಾನಟ್ರಸ್ಟ್‌ನ ಸಹಯೋಗದಲ್ಲಿ ನಗರದ ಹೊರಪೇಟೆರಸ್ತೆಯ ನೀಲಕಂಠೇಶ್ವರದೇವಸ್ಥಾನ ಸಮುದಾಯ ಭವನದಲ್ಲಿ ಕೈಮಗ್ಗ ನೇಕಾರರಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟ ಮೇಳ ಹಮ್ಮಿಕೊಳ್ಳಲಾಗಿದೆ.

ಇದೇ ತಿಂಗಳ 17ರಂದು ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ಶಾಸಕ ಜಿ.ಬಿ. ಜ್ಯೋತಿಗಣೇಶ್‌ಕೈಮಗ್ಗ ನೇಕಾರರ ಉತ್ಪನ್ನಗಳ ಮಾರಾಟ ಮೇಳ ಉದ್ಘಾಟಿಸುವರು.ಜವಳಿ ಇಲಾಖೆ ಉಪ ನಿರ್ದೇಶಕ ಸಂತೋಷ್ ಮತ್ತಿತರರು ಭಾಗವಹಿಸುವರುಎಂದುಆಯೋಜನರಾದ ನೇಕಾರಿಕೆಯಲ್ಲಿರಾಜ್ಯ ಪ್ರಶಸ್ತಿ ಪಡೆದಿರುವಆರ್. ಮಂಜುನಾಥ್ ಹೇಳಿದ್ದಾರೆ.

ನೇಕಾರರಿಂದ ನೇರಗ್ರಾಹಕರಿಗೆಕೈಮಗ್ಗದತಪುಪಿಸುವ ಆಶಯದ ಈ ಮೇಳದಲ್ಲಿ ಆಕರ್ಷಕರಿಯಾಯಿತಿ ವ್ಯವಸ್ಥೆಇದೆ.ಕೈಮಗ್ಗ ನೇಕಾರರಿಂದತಯಾರಿಸಲ್ಪಟ್ಟಅಪ್ಪಟರೇಷ್ಮೆ ಸೀರೆಗಳು, ಮೈಸೂರು ಸಿಲ್ಕ್, ಮೊಳಕಾಲ್ಮೂರು ಸೀರೆ, ಕಂಚಿ ಸೀರೆಗಳು, ರೇಷ್ಮೆ ಶರ್ಟ್ ಪೀಸ್, ಕುರ್ತಿಸ್‌ಟಾಪ್, ಧರ್ಮಾವರಂಸೀರೆಗಳು, ಜೈಪುರ್ ಸೀರೆಗಳು, ಕೊಲ್ಕತ್ತ ಸೀರೆಗಳು, ದೆಹಲಿ ಸೀರೆಗಳು, ಬಾಗಲ್‌ಕೂರ್ ಸೀರೆಗಳು ಕಾಟನ್ ಸೀರೆಗಳು, ಕಾಶ್ಮೀರ್ ಶಾಲುಗಳ ಪ್ರದರ್ಶನ ಮಾರಾಟ ವ್ಯವಸ್ಥೆ ಮಾಡಲಾಗಿದೆಎಂದುಆರ್.ಮಂಜುನಾಥ್ ತಿಳಿಸಿದ್ದಾರೆ.

### ಪಾದಚಾರಿ ಮೇಲ್ಸೇತುವೆ ದುಂದು ವೆಚ್ಚದ ಯೋಜನೆ

ಸೂರ್ಯಪ್ರಗತಿನ್ಯೂಸ್.ಕಾಂ



ತಿಪಟೂರು: ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜು ಸಮೀಪ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ನಿರ್ಮಿಸಲಾಗುತ್ತಿರುವ ಸುಮಾರು ರೂಪಾಯಿ 2 ಕೋಟಿ ವೆಚ್ಚದ ಪಾದಚಾರಿ ಮೇಲ್ಸೇತುವೆ ಸಾರ್ವಜನಿಕರಿಗೆ ಹೆಚ್ಚು ಪ್ರಯೋಜನಕಾರಿಯಾಗದೆ, ದುಂದು ವೆಚ್ಚದ ಯೋಜನೆಯಾಗಿದೆ ಎಂದು ಬಿಜೆಪಿ ಮುಖಂಡ ಲೋಕೇಶ್ವರ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಮೇಲ್ಸೇತುವೆಯಿಂದ ಕಾಲೇಜು ವಿದ್ಯಾರ್ಥಿಗಳಿಗೆ ದಿನದ ನಿರ್ದಿಷ್ಟ ಅವಧಿಯಲ್ಲಿ ಮಾತ್ರ ಅನುಕೂಲವಾಗಲಿದೆ. ಆದರೆ ಹಿರಿಯ ನಾಗರಿಕರು, ಮಹಿಳೆಯರು ಹಾಗೂ ದಿವ್ಯಾಂಗರಿಗೆ ಮೇಲ್ಸೇತುವೆ ಏರಿಳಿಯುವುದು ಕಷ್ಟಕರವಾಗಲಿದೆ. ಹೀಗಾಗಿ ಜನರ ತೆರಿಗೆ ಹಣವನ್ನು ಇಂತಹ ಯೋಜನೆಗಳಿಗೆ ಬಳಸುವುದಕ್ಕಿಂತ ಎಲ್ಲ ವರ್ಗದ ಜನರಿಗೆ ಅನುಕೂಲವಾಗುವ ಕಾಮಗಾರಿಗಳಿಗೆ ವಿನಿಯೋಗಿಸಬೇಕಿತ್ತು ಹಾಗೂ ಮೇಲ್ಸೇತುವೆ ಬದಲಿಗೆ ಅಂಡರ್ ಪಾಸ್ ಮಾರ್ಗ ನಿರ್ಮಿಸಿದರೆ ಸೂಕ್ತವಾಗುತ್ತದೆ ಎಂದರು.

ನಗರದ ರುದ್ರಭೂಮಿ ಅಭಿವೃದ್ಧಿಗೆ ಕಳೆದ ಮೂರು ವರ್ಷಗಳಿಂದ ಸಂಸದರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಿಂದ ಅನುದಾನ ಕೋರಲಾಗಿದ್ದರೂ ಇದುವರೆಗೆ ಯಾವುದೇ ನೆರವು ದೊರೆತಿಲ್ಲ ಎಂದು ಅವರು ಆರೋಪಿಸಿದ್ದಾರೆ. ಜನರ ತೆರಿಗೆ ಹಣವನ್ನು ದೀರ್ಘಕಾಲದ ಸಾರ್ವಜನಿಕ ಉಪಯೋಗದ ಯೋಜನೆಗಳಿಗೆ ಬಳಸಿದರೆ ಮಾತ್ರ ಅದರ ಸದುಪಯೋಗವಾಗುತ್ತದೆ. ಕಡಿಮೆ ಬಳಕೆಯಾಗುವ ಯೋಜನೆಗಳಿಗೆ ರೂಪಾಯಿ 2 ಕೋಟಿ ವೆಚ್ಚ ಮಾಡುವುದು ಸಮಂಜಸವಲ್ಲ ಎಂದು ತಿಳಿಸಿದರು.

ಸಾರ್ವಜನಿಕರ ಅಗತ್ಯತೆ ಮತ್ತು ಸ್ಥಳೀಯ ಪರಿಸ್ಥಿತಿಯನ್ನು ಪರಿಗಣಿಸಿ ಸಂಬಂಧಪಟ್ಟ ಅಧಿಕಾರಿಗಳು ಯೋಜನೆಯನ್ನು ಮರುಪರಿಶೀಲಿಸಬೇಕು ಎಂದು ಲೋಕೇಶ್ವರ ಆಗ್ರಹಿಸಿದ್ದಾರೆ.

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKANAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKANAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. CONTACT : 9901010109 GMAIL: suryapragathi2021@gmail.com.